ಸಂಪಾದಕರು: ರವಿಕುಮಾರ್ ಸಿ.ಹೆಚ್.

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYAPRAGATHI Kannada Daily

ಪ್ರತಿ ಸುದ್ದಿಯ ಧ್ವನಿ

Volume: 04 Issue:311 ಸಂಪುಟ: 04 ಸಂಚಿಕೆ: 311 | Date: 30-12-2025 Tuesday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

# ಸಮ್ಮೇಳನದ ಆಶಯ ಅಭಿವೃದ್ಧಿಗೆ ದಿಕ್ಸೂಚಿಯಾಗಬೇಕು ಗೃಹ ಸಚಿವ ಡಾ.ಜಿ. ಪರಮೇಶ್ವರ್



ತುಮಕೂರು: ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಆಶಯಗಳು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ದಿಕ್ಸೂಚಿಯಾಗಬೇಕು. ಜಿಲ್ಲೆಯ ಅಭಿವೃದ್ಧಿ, ಸಂಸ್ಕೃತಿ ಮತ್ತು ಭಾಷೆಗೆ ತಕ್ಕಂತೆ ಸೂಕ್ತ ಸಲಹೆ, ಸೂಚನೆಗಳನ್ನು ನೀಡುವ ಮೂಲಕ ಸಮ್ಮೇಳನವು ಮಾರ್ಗದರ್ಶಕವಾಗಬೇಕು ಎಂದು ಗೃಹ ಸಚಿವ ಡಾ: ಜಿ. ಪರಮೇಶ್ವರ್ ಅವರು ಹೇಳಿದರು.

ಸೋಮವಾರ ನಗರದ ಗಾಜಿನಮನೆ ಆವರಣದಲ್ಲಿ 17ನೇ ತುಮಕೂರು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯ ಮಟ್ಟದ ಸಾಹಿತ್ಯ ಸಮ್ಮೇಳನಗಳಲ್ಲಿ ರಾಜ್ಯದ ಆಡಳಿತ, ಅಭಿವೃದ್ಧಿ ಹಾಗೂ ಸಮಾಜಕ್ಕೆ ಸಂಬಂಧಿಸಿದ ಹಲವು ಮಹತ್ವದ ವಿಷಯಗಳು ಚರ್ಚೆಗಳಾಗುತ್ತಿದ್ದು, ಅಂದಿನ ಸರ್ಕಾರಗಳಿಗೆ ಪರಿಣಾಮಕಾರಿ ಸಲಹೆ ಸೂಚನೆಗಳನ್ನು ನೀಡಿದ ಇತಿಹಾಸವಿದೆ. ಅಂತೆಯೇ ಈ ಸಮ್ಮೇಳನ ಕೂಡ ಅಭಿವೃದ್ಧಿಗೆ ದಿಕ್ಸೂಚಿ ಆಗಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಸಮ್ಮೇಳನಗಳ ನಿರ್ಣಯಗಳನ್ನು ಸರ್ಕಾರಗಳು ಕಡಿಮೆ ಮಟ್ಟದಲ್ಲಿ ಅಳವಡಿಸಿಕೊಳ್ಳುತ್ತಿರುವುದು ಕಂಡುಬರುತ್ತಿದ್ದರೂ ಕನ್ನಡ ನಾಡಿನ ಬೆಳವಣಿಗೆ ಕನ್ನಡಿಗರಿಂದಲೇ ಆಗಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಜಿಲ್ಲೆಯ 17ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಸಮ್ಮೇಳನದಲ್ಲಿ ಚರ್ಚೆಗೆ ಬರಲಿರುವ ಅನೇಕ ವಿಚಾರಗಳು ಜಿಲ್ಲೆಯ ಹಾಗೂ ರಾಜ್ಯದ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡಲಿವೆ ಎಂದು ತಿಳಿಸಿದರು.

1915ರಲ್ಲಿ ಸ್ಥಾಪನೆಯಾದ ಕನ್ನಡ ಸಾಹಿತ್ಯ ಪರಿಷತ್ ಶತಮಾನದ ಕಾಲದಿಂದ ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಸೇವೆಯಲ್ಲಿ ತೊಡಗಿಸಿಕೊಂಡು ಬಂದಿದೆ. ತುಮಕೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ 1966ರಲ್ಲಿ ಆರಂಭಗೊಂಡು 60 ವರ್ಷಗಳಿಂದ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು.

ತಮ್ಮ ವಿದ್ಯಾರ್ಥಿ ಜೀವನವನ್ನು ನೆನಪಿಸಿಕೊಂಡ ಅವರು, 7ನೇ ತರಗತಿಯಲ್ಲಿ ಓದುತ್ತಿದ್ದಾಗ ಸಿದ್ಧಗಂಗಾ ಮಠದಲ್ಲಿ ನಡೆದ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಸೇವಾದಳದ ವಿದ್ಯಾರ್ಥಿಯಾಗಿ ಭಾಗವಹಿಸಿದ್ದೆ. ಆ ಅನುಭವಗಳು ಇಂದಿಗೂ ನನ್ನ ಮನಸ್ಸಿನಲ್ಲಿ ಜೀವಂತವಾಗಿವೆ ಎಂದು ಹೇಳಿದರು.



ಕನ್ನಡ ಭಾಷೆಗೆ ಈಗಾಗಲೇ 8 ಜ್ಞಾನಪೀಠ ಪ್ರಶಸ್ತಿಗಳು ಲಭಿಸಿರುವುದು, ಕನ್ನಡವನ್ನು ಶಾಸ್ತ್ರೀಯ ಭಾಷೆ ಎಂದು ಗುರುತಿಸಿರುವುದು ಕನ್ನಡ ನಾಡಿಗೂ ಕನ್ನಡಾಂಬೆಗೆ ಗೌರವ ತಂದುಕೊಟ್ಟ ಸಾಧನೆಗಳಾಗಿವೆ ಎಂದ ಅವರು, ಕನ್ನಡ ಸಾಹಿತ್ಯ ಸಮ್ಮೇಳನಗಳು ಕೇವಲ ಭಾಷೆಯ ರಕ್ಷಣೆಗೆ ಮಾತ್ರವಲ್ಲ, ಸಾಹಿತ್ಯದ ಬೆಳವಣಿಗೆಗೂ ಮಹತ್ತರ ಪಾತ್ರವಹಿಸಿವೆ. ಸಮ್ಮೇಳನಗಳು ಅನೇಕ ವಿವಾದಗಳ ನಡುವೆಯೂ ಕನ್ನಡ ಭಾಷೆಯನ್ನು ಸಾಹಿತ್ಯದ ಮೂಲಕ ಉಳಿಸಿ ಬೆಳೆಸಿವೆ ಎಂದು ಹೇಳಿದರು.

ಇಡೀ ಜಗತ್ತಿನಾದ್ಯಂತ ಕನ್ನಡಿಗರು ಕನ್ನಡ ಭಾಷೆಯಷ್ಟೇ ಅಲ್ಲ, ನಮ್ಮ ಸಂಸ್ಕೃತಿಯನ್ನೂ ಜಗದಗಲ ಪ್ರಚಾರ ಮಾಡುತ್ತಿರುವುದು ಹೆಮ್ಮೆಯ ವಿಷಯವಾಗಿದೆ. ಇತ್ತೀಚೆಗೆ ನಾನು ಬೆಹ್ರಾನ್ ಭೇಟಿ ನೀಡಿದ್ದ ಸಂದರ್ಭದಲ್ಲಿ ಅಲ್ಲಿ ಕನ್ನಡ ಸಂಘಟನೆಗಳ ಮೂಲಕ ದೊಡ್ಡ ಕಟ್ಟಡ ನಿರ್ಮಿಸಿ ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಪರಿಚಯಿಸುತ್ತಿರುವುದನ್ನು ಕಂಡೆ. ಅಲ್ಲಿನ ಮಕ್ಕಳಲ್ಲಿ ಕಲೆ ಮತ್ತು ಸಂಸ್ಕೃತಿಯ ಮೇಲಿನ ಆಸಕ್ತಿಯನ್ನು ನೋಡಿ ನಾನು ವೈಯಕ್ತಿಕವಾಗಿ ಒಂದು ಕೋಟಿ ರೂ.ಗಳನ್ನು ಸಂಘಕ್ಕೆ ನೀಡಿದ್ದೇನೆ. ಇಂತಹ ಕನ್ನಡ ಸೇವಕರಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕಾಗಿದೆ ಎಂದು ಹೇಳಿದರು.

ಬೆಂಗಳೂರಿನ ಮೂಲದ ನಾಸಾ ವಿಜ್ಞಾನಿ ಡಾ. ಸೀತಾರಾಮಯ್ಯ ಅವರು ಅಮೆರಿಕದಲ್ಲಿದ್ದರೂ ಕನ್ನಡದಲ್ಲೇ ಮಾತನಾಡುತ್ತಾರೆ. ಇದು ಕನ್ನಡದ ಶಕ್ತಿ ಮತ್ತು ಸಂಸ್ಕೃತಿಯ ಜೀವಂತ ಉದಾಹರಣೆಯಾಗಿದೆ ಎಂದು ಹೇಳಿದರು.

ತುಮಕೂರು ಜಿಲ್ಲೆ ವೇಗವಾಗಿ ಅಭಿವೃದ್ಧಿಯಾಗುತ್ತಿದೆ. ತುಮಕೂರಿಗೆ ಮೆಟ್ರೋ ರೈಲು ತರಲು ಈಗಾಗಲೇ ಸಮಗ್ರ ಯೋಜನಾ ವರದಿಗೆ ಅನುಮೋದನೆ ದೊರೆತಿದೆ. ಸುಮಾರು 20ಸಾವಿರ ಎಕರೆ ಪ್ರದೇಶದಲ್ಲಿ ದೇಶದ ಅತಿದೊಡ್ಡ ಕೈಗಾರಿಕಾ ವಲಯ ಸ್ಥಾಪನೆಯಾಗುತ್ತಿದೆ. ಜಿಲ್ಲೆಯಲ್ಲಿ 9 ಇಂಜಿನಿಯರಿಂಗ್ ಕಾಲೇಜುಗಳು, 3 ಮೆಡಿಕಲ್ ಕಾಲೇಜುಗಳಿದ್ದು, ಶೈಕ್ಷಣಿಕ ಕ್ಷೇತ್ರದಲ್ಲಿಯೂ ತುಮಕೂರು ಮಹತ್ವದ ಕೇಂದ್ರವಾಗಿ ಬೆಳೆಯುತ್ತಿದೆ ಎಂದು ತಿಳಿಸಿದರು.

## ಸರ್ಕಾರಿ ಶಾಲೆಗಳಿಗೆ ಬೀಗಮುದ್ರೆ : ಪ್ರೊ. ಬರಗೂರು ಕಳವಳ

ರಾಜ್ಯದಲ್ಲಿ ದಿನೇ ದಿನೇ ಸರ್ಕಾರಿ ಶಾಲೆಗಳ ಸಂಖ್ಯೆ ಕ್ಷೀಣಿಸುತ್ತಿರುವುದು ಹಾಗೂ ನೂರಾರು ಶಾಲೆಗಳು ಮುಚ್ಚುವ ಭೀತಿ ಎದುರಾಗುತ್ತಿರುವ ಬಗ್ಗೆ ನಾಡಿನ ಹಿರಿಯ ಸಾಹಿತಿ ಪ್ರೊ. ಬರಗೂರು ರಾಮಚಂದ್ರಪ್ಪ ಅವರು ಕಳವಳ ವ್ಯಕ್ತಪಡಿಸಿದ್ದಾರೆ. ಸೋಮವಾರ ತುಮಕೂರಿನ ಗಾಜಿನ ಮನೆಯಲ್ಲಿ ಆಯೋಜಿಸಲಾಗಿದ್ದ 17ನೇ ತುಮಕೂರು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ವೇದಿಕೆಯಲ್ಲಿ ರಾಷ್ಟ್ರಕವಿ ಕುವೆಂಪು ಅವರ ಜನ್ಮ ದಿನಾಚರಣೆ ಅಂಗವಾಗಿ ನಡೆದ ವಿಶ್ವ ಮಾನವ ದಿನಾಚರಣೆಯ ಭಾಷಣ ಮಾಡಿ ಅವರು, ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯು ಬಡ ಮತ್ತು ಮಧ್ಯಮ ವರ್ಗದ ಮಕ್ಕಳ ಪಾಲಿನ ಆಶಾಕಿರಣವಾಗಿದ್ದು, ಅದನ್ನು ಉಳಿಸಿಕೊಳ್ಳುವುದು ಸರ್ಕಾರದ ಆದ್ಯತೆಯಾಗಬೇಕು. ಆದರೆ ಶಿಕ್ಷಕರು ಮಕ್ಕಳ ಕೊರತೆ ಕಾರಣ ಸರ್ಕಾರಿ ಶಾಲೆಗಳನ್ನು ಮುಚ್ಚುವ ಸರ್ಕಾರದ ಇರಾದೆ ಆತಂಕಕಾರಿ ಎಂದು ಕಳವಳ ವ್ಯಕ್ತಪಡಿಸಿದರು.

ಖಾಸಗಿ ಶಾಲೆಗಳ ವ್ಯಾಮೋಹ ಮತ್ತು ಸರ್ಕಾರಿ ಶಾಲೆಗಳ ಮೂಲಸೌಕರ್ಯಗಳ ಕೊರತೆಯಿಂದಾಗಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಗಣನೀಯವಾಗಿ ಕಡಿಮೆಯಾಗುತ್ತಿದೆ. ಇದು ಶಾಲೆಗಳನ್ನು ಶೂನ್ಯ ದಾಖಲಾತಿ ಶಾಲೆಗಳನ್ನಾಗಿ ಮಾರ್ಪಡಿಸಿ, ಅಂತಿಮವಾಗಿ ಬೀಗ ಹಾಕುವ ಸಂದರ್ಭ ಉಂಟುಮಾಡುತ್ತಿದೆ ಎಂದರು.

ಸರ್ಕಾರಕ್ಕೆ ರಾಷ್ಟ್ರಕವಿ ಕುವೆಂಪು ಅವರ ಮೇಲೆ ನಿಜವಾದ ಗೌರವವಿದ್ದರೆ, ಮೊದಲು ಹಳ್ಳಿಗಳಲ್ಲಿರುವ ಸರ್ಕಾರಿ ಶಾಲೆಗಳನ್ನು ಉಳಿಸಬೇಕು ಮತ್ತು ಅಭಿವೃದ್ಧಿಪಡಿಸಬೇಕು. ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಶಾಲೆಗಳನ್ನು ಮುಚ್ಚುವ ಅಥವಾ ವಿಲೀನಗೊಳಿಸುವ ಸರ್ಕಾರದ ನಡವಳಿಕೆಯನ್ನು ಪ್ರಶ್ನಿಸಿದ ಅವರು, ಕನ್ನಡ ಕೇವಲ ಭಾಷೆಯ ಪ್ರಶ್ನೆಯಲ್ಲ, ಬದಲಾಗಿ ನಮ್ಮ ಸಂಸ್ಕೃತಿ ಮತ್ತು ಪ್ರಜಾಪ್ರಭುತ್ವದ ಅಸ್ತಿತ್ವದ ಪ್ರಶ್ನೆಯಾಗಿದೆ ಎಂದು ಹೇಳಿದರು.

ಸರ್ಕಾರಿ ಶಾಲೆಗಳು ವಿದ್ಯಾರ್ಥಿಗಳನ್ನು ಸೆಳೆಯುವಂತಾಗಲು ಕನಿಷ್ಠ ಮೂಲಸೌಕರ್ಯಗಳನ್ನು ಒದಗಿಸಬೇಕು. ಶಾಲೆಗಳು ನೋಡಲು ಆಕರ್ಷಕವಾಗಿರಬೇಕು. ಶಿಕ್ಷಣದ ಗುಣಮಟ್ಟ ಹೆಚ್ಚಿಸಿ ವಿದ್ಯಾರ್ಥಿಗಳು ತಾವಾಗಿಯೇ ಬರುವಂತಹ ವಾತಾವರಣ ನಿರ್ಮಿಸಬೇಕು. ಕಡ್ಡಾಯ ಶಿಕ್ಷಣ ಕಾಯಿದೆಯಂತೆ ಪ್ರತಿ ಎರಡು ಕಿ.ಮೀ.ಗೆ ಕಿರಿಯ ಪ್ರಾಥಮಿಕ, 3 ಕಿ.ಮೀ.ಗೆ ಹಿರಿಯ ಪ್ರಾಥಮಿಕ ಹಾಗೂ 5 ಕಿ.ಮೀ. ವ್ಯಾಪ್ತಿಯಲ್ಲಿ ಪ್ರೌಢಶಾಲೆ ಇರುವಂತೆ ಮಾಡುವುದು ಸರ್ಕಾರದ ಕರ್ತವ್ಯ ಎಂದರು.

ಕನ್ನಡ ಶಾಲೆಗಳು ಇಲ್ಲದಿದ್ದರೆ ಭವಿಷ್ಯದಲ್ಲಿ ಕನ್ನಡ ಪತ್ರಿಕೆಗಳನ್ನು ಓದುವವರು, ಕನ್ನಡ ನಾಟಕ ಹಾಗೂ ಸಿನಿಮಾಗಳನ್ನು ನೋಡುವವರ ಸಂಖ್ಯೆ ಕ್ಷೀಣಿಸುತ್ತದೆ. ಇದು ಕನ್ನಡ ಸಾಹಿತ್ಯ ಲೋಕಕ್ಕೆ ದೊಡ್ಡ ಹೊಡೆತ ಎಂದ ಅವರು, ಸರ್ಕಾರಿ ಶಾಲೆಗಳಿಲ್ಲದಿದ್ದರೆ ಸ್ವಾತಂತ್ರ್ಯ ದಿನಾಚರಣೆ, ಗಣರಾಜ್ಯೋತ್ಸವ, ಅಂಬೇಡ್ಕರ್ ಹಾಗೂ ಗಾಂಧಿ ಜಯಂತಿಗಳಂತಹ ಪ್ರಜಾಸತ್ತಾತ್ಮಕ ಉತ್ಸವಗಳು ಕ್ಷೀಣಿಸುವ ಪ್ರಸಂಗಗಳು ಸಮೀಪಿಸುತ್ತಿವೆ ಎಂದರು.

ಇಂಗ್ಲಿಷ್ ಮಾಧ್ಯಮದ ಅಬ್ಬರದ ನಡುವೆಯೂ ಕನ್ನಡವನ್ನು ಕಡ್ಡಾಯವಾಗಿ ಕಲಿಯುವಂತಾಗಬೇಕು ಎಂಬುದು ಕುವೆಂಪು ಅವರ ಆಶಯವನ್ನು ವ್ಯಕ್ತ ಪಡಿಸಿದ ಅವರು, ಕುವೆಂಪು ಗೌರವ ಶಾಲೆಗಳ ಉಳಿವಲ್ಲೇ ಇದೆ. ಕನ್ನಡ ಸಾಹಿತ್ಯ ಲೋಕದಲ್ಲಿ ಆಧುನಿಕತೆಯ ಮುಖಪುಟವಾಗಿರುವ ಕುವೆಂಪು ಅವರು ಎಂದಿಗೂ ಪ್ರಭುತ್ವಕ್ಕೆ ತಲೆಬಾಗಿದವರಲ್ಲ. ಅವರು ಆತ್ಮಭಿಮಾನದ ಸಂಕೇತ. ಜಾತಿ ಪದ್ಧತಿಯನ್ನು ವಿರೋಧಿಸಿ, ಭಾರತೀಯ ಒಕ್ಕೂಟ ವ್ಯವಸ್ಥೆಯನ್ನು ಬಲವಾಗಿ ಪ್ರತಿಪಾದಿಸಿದವರು ಎಂದು ಹೇಳಿದರು.

ಬೆಳ್ಳಾವಿ ಕಾರದೇಶ್ವರ ಮಠದ ಶ್ರೀ ಶ್ರೀ ಕಾರದ ವೀರಬಸವ ಮಹಾಸ್ವಾಮಿಗಳು, 16ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷ ಡಾ: ಅಗ್ರಹಾರ ಕೃಷ್ಣಮೂರ್ತಿ, ಶಾಸಕ ಜಿ.ಬಿ. ಜ್ಯೋತಿ ಗಣೇಶ್, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ. ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಸೇರಿದಂತೆ ಮತ್ತಿತರರು ಹಾಜರಿದ್ದರು.

# ಬೆಂಗಳೂರಿನಲ್ಲಿ ಹೊಸ ವರ್ಷಾಚರಣೆಗೆ ಭಾರಿ ಭದ್ರತೆ

ಹೊಸ ವರ್ಷಾಚರಣೆಗೆ ಬೆಂಗಳೂರಿನ ಈ ಫ್ಲೈಓವರ್‌ಗಳು, ಮೆಟ್ರೋ ಸ್ಟೇಷನ್ ಕ್ಲೋಸ್: ಯಾವ್ಯಾವ ಚಟುವಟಿಕೆ ಬ್ಯಾನ್? ಇಲ್ಲಿದೆ ಮಾಹಿತಿ ಬೆಂಗಳೂರಿನಲ್ಲಿ ಹೊಸ ವರ್ಷಾಚರಣೆಗೆ ಭಾರಿ ಭದ್ರತೆ ಒದಗಿಸಲಾಗಿದೆ. ಡಿಸೆಂಬರ್ 31 ರಂದು ರಾತ್ರಿ 10 ಗಂಟೆಯ ನಂತರ 5 0 ಫ್ಲೈಓವರ್‌ಗಳನ್ನು ಬಂದ್ ಮಾಡಲಾಗುವುದು ಎಂದು ಪೊಲೀಸ್ ಆಯುಕ್ತರು ತಿಳಿಸಿದ್ದಾರೆ. ಡ್ರಂಕ್ ಅಂಡ್ ಡ್ರೈವ್ ತಪಾಸಣೆ, ಅಕ್ರಮ ಚಟುವಟಿಕೆಗಳ ನಿಗಾವಹಿಸಲು 20,000 ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗುತ್ತದೆ.

ಹೊಸ ವರ್ಷದ ಸಂಭ್ರಮಾಚರಣೆಗೆ ಬೆಂಗಳೂರಿನಲ್ಲಿ ಭದ್ರತೆ ಹೆಚ್ಚಿಸಲಾಗಿದ್ದು, ಬೆಂಗಳೂರು ನಗರಾದ್ಯಂತ ಪೊಲೀಸ್ ಹೈಅಲರ್ಟ್ ಘೋಷಿಸಲಾಗಿದೆ. ಡಿಸೆಂಬರ್ 31ರಂದು ರಾತ್ರಿ 10 ಗಂಟೆಯ ನಂತರ ನಗರದ ಪ್ರಮುಖ 50 ಫ್ಲೈಓವರ್‌ಗಳನ್ನು ತಾತ್ಕಾಲಿಕವಾಗಿ ಬಂದ್ ಮಾಡಲಾಗುತ್ತದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ತಿಳಿಸಿದ್ದಾರೆ.





ಎಲ್ಲೆಡೆ ಡ್ರಂಕ್ ಅಂಡ್ ಡ್ರೈವ್ ತಪಾಸಣೆ ಹೊಸ ವರ್ಷದ ಸಂಭ್ರಮದ ವೇಳೆ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕಲು ನಗರದಲ್ಲಿ 166 ಕಡೆ ಡ್ರಂಕ್ ಅಂಡ್ ಡ್ರೈವ್ ತಪಾಸಣೆ ನಡೆಸಲಾಗುತ್ತದೆ. ವ್ಹೀಲಿಂಗ್ ಹಾಗೂ ಅಪಾಯಕಾರಿ ಸ್ಟಂಟ್ ಮಾಡುವವರ ಮೇಲೆ ಕಠಿಣ ನಿಗಾ ವಹಿಸಲಾಗಿದ್ದು, ಇಂತಹ ಕೃತ್ಯಗಳು ನಡೆಯುವ 92 ಸ್ಥಳಗಳನ್ನು ಗುರುತಿಸಿ ಅಲ್ಲಿ ಹೆಚ್ಚುವರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗುತ್ತದೆ ಎಂದು ಅವರು ಹೇಳಿದರು. ಎಂಜಿ ರಸ್ತೆ ಮೆಟ್ರೋ ನಿಲ್ದಾಣ ಬಂದ್



ಡಿಸೆಂಬರ್ 31ರಂದು ರಾತ್ರಿ 10 ಗಂಟೆಯ ನಂತರ ಎಂಜಿ ರಸ್ತೆ ಮೆಟ್ರೋ ನಿಲ್ದಾಣವನ್ನು ಬಂದ್ ಮಾಡಲಾಗುತ್ತದೆ. ನಿಗದಿತ ಸಮಯಕ್ಕೆ ಮೆಟ್ರೋ ಸೇವೆಗಳನ್ನು ನಿಯಂತ್ರಿಸುವಂತೆ ಸೂಚನೆ ನೀಡಲಾಗಿದೆ. ಮದ್ಯಪಾನ ಮಾಡಿ ಸಾರ್ವಜನಿಕವಾಗಿ ಕಿರಿಕಿರಿ ಮಾಡುವುದು, ಗಲಾಟೆ ಅಥವಾ ಅಶಾಂತಿ ಸೃಷ್ಟಿಸಿದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಆಯುಕ್ತರು ಎಚ್ಚರಿಕೆ ನೀಡಿದ್ದಾರೆ. ನಗರದ ಪಬ್, ರೆಸ್ಟೋರೆಂಟ್, ಕ್ಲಬ್ ಹಾಗೂ ರೆಸಾರ್ಟ್‌ಗಳಿಗೆ ಸಮಯ ಮಿತಿ ಕಡ್ಡಾಯಗೊಳಿಸಲಾಗಿದ್ದು, ಡಿಜೆ ಹಾಗೂ ಲೌಡ್‌ಸ್ಪೀಕರ್ ಬಳಕೆಗೆ ಅನುಮತಿ ಮತ್ತು ಸಮಯ ಮಿತಿ ವಿಧಿಸಲಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಅಶ್ಲೀಲ ವರ್ತನೆ, ಶಬ್ದ ಮಾಲಿನ್ಯ, ಅಕ್ರಮ ಪಾರ್ಟಿಗಳು ಹಾಗೂ ಅಪಾಯಕಾರಿ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ.

ಬೆಂಗಳೂರಿನಾದ್ಯಂತ 20 ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜನೆ ಹೊಸ ವರ್ಷಾಚರಣೆ ವೇಳೆ ಭದ್ರತೆಗಾಗಿ ನಗರಾದ್ಯಂತ ಸುಮಾರು 20 ಸಾವಿರ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲಾಗಿದ್ದು, ಸಿಸಿಟಿವಿ, ಡ್ರೋನ್ ಹಾಗೂ ತಾಂತ್ರಿಕ ಸಾಧನಗಳ ಮೂಲಕ ನಿಗಾವಹಿಸಲಾಗಿದೆ. ಯಾವುದೇ ಅಹಿತಕರ ಘಟನೆ ನಡೆದರೆ ತಕ್ಷಣ ಪೊಲೀಸರಿಗೆ ಮಾಹಿತಿ ನೀಡುವಂತೆ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಸಾರ್ವಜನಿಕರಿಗೆ ಮನವಿ ಮಾಡಿದ್ದಾರೆ.

ಭದ್ರತೆಗಾಗಿ ಬೆಂಗಳೂರು ನಗರದ ಹಲವೆಡೆ ವಾಚ್ ಟವರ್‌ಗಳ ನಿಯೋಜನೆ ಮಾಡಲಾಗಿದೆ. ಸುರಕ್ಷಿತ ವಲಯಗಳ ಗುರುತಿಸುವಿಕೆ ಹಾಗೂ ಹೀಟ್ ಮ್ಯಾಪ್ ವ್ಯವಸ್ಥೆ ಮಾಡಲಾಗಿದೆ. ಸಹಾಯ, ದೂರುಗಳಿಗಾಗಿ ಮಹಿಳಾ ಸಹಾಯ ಕೇಂದ್ರಗಳ ಸ್ಥಾಪನೆ ಮಾಡಲಾಗುತ್ತಿದೆ. ಜನಸಂದಣಿ ನಿಯಂತ್ರಣಕ್ಕೆ ಮೆಟ್ರೋ ರೈಲುಗಳ ಸಮಯಾವಧಿ ವಿಸ್ತರಣೆ, ಸಂಚಾರ ಸುಗಮಗೊಳಿಸಲು ಬಸ್ ಸೇವೆಗಳ ಸಮಯಾವಧಿ ಹೆಚ್ಚಳಕ್ಕೆ ಕ್ರಮ ಕೈಗೊಳ್ಳಲಾಗಿದೆ. ಹೋಟೆಲ್‌ಗಳು, ಲಾಡ್ಜ್‌ಗಳಲ್ಲಿ ನಿಯಮ ಪಾಲನೆ ಬಗ್ಗೆ ಪರಿಶೀಲನೆ ನಡೆಸಲಾಗುವುದು. ಸಮಾಜ ವಿರೋಧಿ ಅಂಶಗಳನ್ನು ತಡೆಗಟ್ಟಲು ಎಐ ಕ್ಯಾಮರಾಗಳ ಬಳಕೆ ಮಾಡಲಾಗುವುದು. ಕ್ಯೂಆರ್‌ಟಿ, ಚೆನ್ನಮ್ಮ ಪಡೆ ಸೇರಿ ವಿಶೇಷ ಪೊಲೀಸ್ ಪಡೆ ನಿಯೋಜನೆ ಮಾಡಲಾಗುತ್ತದೆ ಎಂದು ಪೊಲೀಸ್ ಆಯುಕ್ತರು ತಿಳಿಸಿದ್ದಾರೆ.

## ಕೆರೆಗೆ ಹಾರಿ ತಾಯಿ ವರ್ಷದ ಮಗ ಆತ್ಮಹತ್ಯೆ



8 ವರ್ಷದ ಮಗನ ಜೊತೆಗೆ ಕೆರೆಗೆ ಹಾರಿ ತಾಯಿ ಆತ್ಮಹತ್ಯೆ ಮಾಡಿಕೊಂಡಿರುವಂತಹ ಘಟನೆ ತುಮಕೂರು ಜಿಲ್ಲೆಯ ಶಿರಾ ತಾಲೂಕಿನ ಕಳ್ಳಂಬೆಳ್ಳ ಕೆರೆಯಲ್ಲಿ ನಡೆದಿದೆ. ತುಮಕೂರು ತಾಲೂಕಿನ ಸೋರೆಕುಂಟೆ ಗ್ರಾಮದ ತಾಯಿ ಹಂಸಲೇಖ(36) ಮತ್ತು ಪುತ್ರ ಗುರುಪ್ರಸಾದ್(8) ಮೃತರು. ಸ್ಥಳಕ್ಕೆ ಕಳ್ಳಂಬೆಳ್ಳ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದು, ಕೆರೆಯಿಂದ ತಾಯಿ, ಮಗನ ಮೃತದೇಹವನ್ನು ಪೊಲೀಸರು ಹೊರತೆಗೆದಿದ್ದಾರೆ. ಮರಣೋತ್ತರ ಪರೀಕ್ಷೆಗೆ ಶವಗಳು ಜಿಲ್ಲಾಸ್ಪತ್ರೆಯ ಶವಾಗಾರಕ್ಕೆಕಳುಹಿಸಲಾಗಿದೆ ಭೂಪಸಂದ್ರ ಗ್ರಾಮದ ನಾಗೇಶ್ ಜೊತೆಗೆ ಹಂಸಲೇಖರ ಮದುವೆಯಾಗಿತ್ತು. ಅನಾರೋಗ್ಯದಿಂದ ಹಂಸಲೇಖ ಪತಿ ನಾಗೇಶ್ ಮೃತಪಟ್ಟಿದ್ದರು. ದಂಪತಿಗೆ ಇಬ್ಬರು ಗಂಡು ಮಕ್ಕಳು ಇದ್ದಾರೆ. 3 ವರ್ಷದ ಹಿಂದೆ ನಾಗೇಶ್ ಸಹೋದರ ಲೋಕೇಶ್ ಜತೆ ಹಂಸಲೇಖಳಿಗೆ ಮದುವೆ ಮಾಡಿ ಕೊಡಲಾಗಿತ್ತು. ಆದರೆ ಏಕಾಏಕಾ ಇಂದು ಬೆಳಗ್ಗೆ ಕೆರೆಯಲ್ಲಿ ಮಗನ ಜೊತೆಗೆ ತಾಯಿಯ ಶವ ಪತ್ತೆ ಆಗಿದೆ.

# ಶಾಲೆಗಳು ಉಳಿದರೆ ಕನ್ನಡವೂ ಉಳಿಯುತ್ತದೆ: ಡಾ.ಕರೀಗೌಡ ಬೀಚನಹಳ್ಳಿ ಅಭಿಮತ



ತುಮಕೂರು: ಶಾಲೆಗಳು ಉಳಿದರೆ ಕನ್ನಡವೂ ಉಳಿತ್ತದೆ. ಆದ್ದರಿಂದ ಸರ್ಕಾರ ಯಾವುದೇ ಕೊರತೆಯ ಕಾರಣ ಹೇಳಿ ಶಾಲೆಗಳನ್ನು ಮುಚ್ಚಬಾರದು ಎಂದು 17ನೇ ತುಮಕೂರು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ ಸಾಹಿತಿ, ವಿದ್ವಾಂಸ ಡಾ. ಕರೀಗೌಡ ಬೀಚನಹಳ್ಳಿ ಅಭಿಪ್ರಾಯಿಸಿದ್ದಾರೆ.

ತುಮಕೂರಿನ ಅಮಾನಿಕೆರೆ ಗಾಜಿನಮನೆಯಲ್ಲಿ ಡಿಸೆಂಬರ್ 29 ಹಾಗೂ 30ರಂದು ಎರಡು ದಿನಗಳು ನಡೆಯುತ್ತಿರುವ 17ನೇ ತುಮಕೂರು ಜಿಲ್ಲಾ ಸಾಹಿತ್ಯ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ತಮ್ಮ ಸರ್ವಾಧ್ಯಕ್ಷರ ಭಾಷಣ ಪ್ರತಿ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಕರ್ನಾಟಕದ ಶಿಕ್ಷಣ ಇಲಾಖೆಯ ವರದಿಗಳ ಪ್ರಕಾರ ರಾಜ್ಯದಲ್ಲಿ 3222 ಸರ್ಕಾರಿ ಶಾಲೆಗಳು ಶತಮಾನ ಕಂಡಿವೆ. ಈ ಶಾಲೆಗಳು ದುರಸ್ತಿಯಾಗಿ ಸಬಲೀಕರಣಗೊಳ್ಳಬೇಕಿದೆ. ಅವುಗಳ ಜೀರ್ಣೋದ್ಧಾರದ ಅವಶ್ಯಕತೆ ಇದೆ. ಕೆಲವು ಊರುಗಳಲ್ಲಿ ಶಾಲಾ ಕಟ್ಟಡಗಳಿಲ್ಲ. ಕೆಲವೆಡೆ ಶಿಕ್ಷಕರಿಲ್ಲ, ಕೆಲವೆಡೆ ಮಕ್ಕಳೇ ಇಲ್ಲ ಎಂಬ ವೈರುಧ್ಯಗಳು ಇವೆ. ಆದರೆ ಸರ್ಕಾರ ಇದರ ಸುಧಾರಣೆಗೆ ಕ್ರಮ ವಹಿಸಬೇಕೆ ವಿನಃ ಕೊರತೆಯ ಕಾರಣ ಹೇಳಿ ಶಾಲೆಗಳನ್ನು ಮುಚ್ಚುವ ಕ್ರಮಕ್ಕೆ ಮುಂದಾಗಬಾರದು ಎಂದು ಅವರು ಹೇಳಿದರು.

ಕರ್ನಾಟಕದ ವಿಶ್ವ ವಿದ್ಯಾಲಯಗಳು ಆರ್ಥಿಕ ಅನುದಾನವಿಲ್ಲದೆ, ಬೋಧಕರ ಕೊರತೆಯಿಂದ ದಿನೇ ದಿನೇ ಅವನತಿಯ ಹಾದಿ ಹಿಡಿದಿವೆ ಎಂದು ಆತಂಕ ವ್ಯಕ್ತಪಡಿಸಿದ ಅವರು, ನಿಕಾಯಕ್ಕೊಂದು ವಿಶ್ವವಿದ್ಯಾಲಯ ತೆರೆದು ಅದಕ್ಕೊಬ್ಬ ಕುಲಪತಿ ನೇಮಿಸಿ ಸರ್ಕಾರ ಕೈತೊಳೆದುಕೊಳ್ಳುತ್ತಿದೆ. ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಇಲಾಖೆಯ ಯುಜಿಸಿ ನಿಯಮಗಳು ಹಾಗೂ ರಾಜ್ಯ ಸರ್ಕಾರದ ನಿಯಮಗಳ ಗೊಂದಲಗಳಲ್ಲಿ ಉನ್ನತ ಶಿಕ್ಷಣ ವ್ಯವಸ್ಥೆ ಅಪಾಯದಲ್ಲಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಕನಿಷ್ಠ 10ನೇ ತರಗತಿವರೆಗಾದರೂ ಶಿಕ್ಷಣ ರಾಷ್ಟ್ರೀಕರಣವಾಗುವುದು ಅನಿವಾರ್ಯ ಎಂದು ಪ್ರತಿಪಾದಿಸಿದ ಅವರು, ಮಹಿಳೆಯರ ಧ್ವನಿಗಳು ಅವರ ದೃಷ್ಟಿಕೋನಗಳನ್ನು ವಿಶ್ಲೇಷಿಸುವ ಚಿಂತನೆಗಳು ರೂಪುಗೊಳ್ಳಬೇಕಾಗಿದೆ. ಸಾಮಾಜಿಕವಾಗಿ, ರಾಜಕೀಯವಾಗಿ, ವೈಚಾರಿಕವಾಗಿ ಸಮಸ್ಯೆಗಳ್ನು ಅನ್ವೇಷಿಸುವತ್ತ ಲೇಖಕಿಯರು ಧಾವಿಸಬೇಕು ಎಂದರು.

ಹಿಂದಿ ಭಾಷೆಯನ್ನು ಕೇಂದ್ರ ಸರ್ಕಾರ ಪ್ರತ್ಯಕ್ಷವಾಗಿ ಹಾಗೂ ಪರೋಕ್ಷವಾಗಿ ಪ್ರಾದೇಶಿಕ ಭಾಷೆಗಳ ಮೇಲೆ ಹೇರುತ್ತಿರುವುದು ಕಳವಳಕಾರಿ ಎಂದ ಅವರು, ಹಿಂದಿ ಒಂದು ಆಕ್ರಮಣಕಾರಿ ಭಾಷೆ. ಈ ಮನೋಭಾವ ಭಾರತದ ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾದ ನಿಲುವು ಎಂದು ಡಾ. ಬೀಚನಹಳ್ಳಿ ಹೇಳಿದರು.

ಇತ್ತೀಚಿನ ದಿನಗಳಲ್ಲಿ ದೇಶದಲ್ಲಿ ಜಾತಿ ಧರ್ಮಗಳ ಪ್ರಶ್ನೆ ವಿಜೃಂಭಿಸುತ್ತಿರುವುದು ಬಹುತ್ವ ಭಾರತಕ್ಕೆ ಆರೋಗ್ಯಕಾರಿಯಲ್ಲ ಎಂದು ಕಳವಳ ವ್ಯಕ್ತಪಡಿಸಿದ ಅವರು, ದೇಶ, ನಾಡು, ನುಡಿ ರಕ್ಷಣೆ ಎಲ್ಲರ ಜವಾಬ್ದಾರಿ ಎಂದು ಕರೆ ನೀಡಿದರು.

## ನುಡಿ ತೇರಿಗೆ ಅದ್ದೂರಿ ಚಾಲನೆ

ತುಮಕೂರಿನ ಅಮಾನಿಕೆರೆ ಗಾಜಿನ ಮನೆಯಲ್ಲಿ ಡಿಸೆಂಬರ್ 29 ಮತ್ತು 30ರಂದು ಹಮ್ಮಿಕೊಳ್ಳಲಾಗಿದ್ದ 17ನೇ ತುಮಕೂರು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಅದ್ದೂರಿ ಚಾಲನೆ ದೊರೆಯಿತು.

ಸೋಮವಾರ ಮುಂಜಾನೆ 7 ಗಂಟೆಗೆ ಗಾಜಿನ ಮನೆ ಆವರಣದಲ್ಲಿ ರಾಷ್ಟ್ರ ಧ್ವಜ ಹಾಗೂ ಕನ್ನಡ ಧ್ವಜಾರೋಹಣ ಮಾಡುವ ಮೂಲಕ ನುಡಿ ತೇರಿಗೆ ಅದ್ದೂರಿ ಚಾಲನೆ ನೀಡಲಾಯಿತು. ತುಮಕೂರು ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಅವರು ಧ್ವಜಾರೋಹಣ ನೆರವೇರಿಸಿದರು.

ನಂತರಬೆಳಿಗ್ಗೆ9ಗಂಟೆಗೆತುಮಕೂರುಮಹಾನಗರಪಾಲಿಕೆ ಆವರಣದಲ್ಲಿ ಸಮ್ಮೇಳನದ ಸರ್ವಾಧ್ಯಕ್ಷರಾದ ಡಾ: ಕರೀಗೌಡ ಬೀಚನಹಳ್ಳಿ, ಶಾಸಕರಾದ ಜಿ.ಬಿ. ಜ್ಯೋತಿಗಣೇಶ್, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ. ಪ್ರಭು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ., ಮಹಾನಗರಪಾಲಿಕೆ ಆಯುಕ್ತ ಯೋಗಾನಂದ್ ಸೇರಿದಂತೆ ಅಪಾರ ಸಾಹಿತ್ಯಾಸಕ್ತರು, ಕನ್ನಡಾಭಿಮಾನಿಗಳ ಸಮ್ಮುಖದಲ್ಲಿ ಸಂವಿಧಾನ ಶಿಲ್ಪಿ ಡಾ: ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ನಾಡ ದೇವಿ ಕನ್ನಡಾಂಬೆ ಹಾಗೂ ಸಮ್ಮೇಳನದ ಸರ್ವಾಧ್ಯಕ್ಷರಾದ ಡಾ: ಕರೀಗೌಡ ಬೀಚನಹಳ್ಳಿ ದಂಪತಿಯನ್ನು ಬೆಳ್ಳಿ ಸಾರೋಟಿನಲ್ಲಿ ಮೆರವಣಿಗೆಗೆ ಅಣಿಗೊಳಿಸಲಾಯಿತು.

ಡೊಳ್ಳು, ನಂದಿಧ್ವಜ, ಕೋಲಾಟ, ವೀರಗಾಸೆ, ಸೋಮನಕುಣಿತ, ತಮಟೆ, ಅರೆವಾದ್ಯ, ಚಿಟ್ಟಿಮೇಳ, ಕೊಂಬುಕಹಳೆ ಸೇರಿದಂತೆ ವಿವಿಧ ಜಾನಪದ ಕಲಾತಂಡಗಳ ಅದ್ದೂರಿ ಮೆರವಣಿಗೆಯೊಂದಿಗೆ ಟೌನ್‌ಹಾಲ್ ವೃತ್ತದಿಂದ ಎಂ.ಜಿ.ರಸ್ತೆ, ಗುಂಚಿಚೌಕ, ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದ ಡಾ: ಅಂಬೇಡ್ಕರ್ ರಸ್ತೆ ಮಾರ್ಗವಾಗಿ ಗಾಜಿನಮನೆಯ ವೇದಿಕೆಗೆ ಮೆರವಣಿಗೆ ಸಾಗಿತು. ಮೆರವಣಿಗೆಯುದ್ದಕ್ಕೂ ಕನ್ನಡಾಭಿಮಾನಿಗಳು ಸರ್ವಾಧ್ಯಕ್ಷ ದಂಪತಿಗೆ ಪುಷ್ಪವೃಷ್ಟಿಗರೆದು ಸಂತಸ ವ್ಯಕ್ತಪಡಿಸಿದರು.

ಕನ್ನಡಿಗರ ಆತ್ಮಸಾಕ್ಷಿಯ ಸಂಭ್ರಮ, ಭಾಷೆಯ ಗೌರವದ ಹಬ್ಬ ಮತ್ತು ಸಂಸ್ಕೃತಿಯ ಜೀವಂತ ರಂಗೋಲಿ ಎಂಬುದಾಗಿ ಸಮ್ಮೇಳನದ ಉತ್ಸವ ನೆನಪಿನಲ್ಲಿ ಸದಾಕಾಲ ಉಳಿಯುವಂತಾಯಿತು.



ವೇದಿಕೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ, ಖ್ಯಾತ ಸಾಹಿತಿ ನಾಡೋಜ ಡಾ: ಬರಗೂರು ರಾಮಚಂದ್ರಪ್ಪ, ನಿಕಟಪೂರ್ವ ಸಾಹಿತ್ಯ ಸಮ್ಮೇಳನದ ಅಧ್ಯಕ್ಷ ಅಗ್ರಹಾರ ಕೃಷ್ಣಮೂರ್ತಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತಿಯಲ್ಲಿ 2 ದಿನಗಳ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಚಾಲನೆ ದೊರೆಯಿತು.

## ಕನ್ನಡದ ಅಸ್ತಿತ್ವಕ್ಕಾಗಿ ಕ್ರಿಯಾಶೀಲತೆ ಅಗತ್ಯ : ಡಾ: ಎನ್. ತಿಪ್ಪೇಸ್ವಾಮಿ

ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಗೆ ಅವಿನಾಭಾವ ಸಂಬಂಧವಿದ್ದು, ಕನ್ನಡದ ಅಸ್ತಿತ್ವವನ್ನು ಉಳಿಸಲು ಸಾಹಿತ್ಯದಲ್ಲಿ ಕ್ರಿಯಾಶೀಲತೆ ನಿರಂತರವಾಗಿರಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಅಭಿಪ್ರಾಯ ವ್ಯಕ್ತಪಡಿಸಿದರು.

ಸೋಮವಾರ ನಗರದ ಗಾಜಿನ ಮನೆಯಲ್ಲಿ 17ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಧ್ವಜಾರೋಹಣ

# ಕುವೆಂಪು ಪ್ರಣೀತ ವಿಶ್ವಮಾನವ ಸಂದೇಶದ ಪಂಚ ಮಂತ್ರಗಳು



## (1) ಮನುಜಮತ (2) ವಿಶ್ವಪಥ (3) ಸರ್ವೋದಯ ((4) ಸಮನ್ವಯ (5) ಪೂರ್ಣದೃಷ್ಟಿ –

ಇವೇ ಪಂಚಮಂತ್ರಗಳು. ಇಲ್ಲಿ ಕುವೆಂಪು ಬಳಸಿರುವ ಮಂತ್ರ ಶಬ್ದಕ್ಕೆ ಪುರೋಹಿತಶಾಹಿ ಅರ್ಥವಾಗಲಿ ಅಥವಾ ಬ್ಲಾಕ್ ಸೈನ್ಸ್ ನೆಲೆಯ ಮಂತ್ರಶಕ್ತಿಯಾಗಲಿ ಸಂಬಂಧಪಟ್ಟಿಲ್ಲ. ಪಂಚಮಂತ್ರ ಕುರಿತು ಸ್ವತಃ ಕುವೆಂಪು ಅವರೇ ಒಂದು ಸಂಕ್ಷಿಪ್ತ ವಿವರಣೆಯನ್ನು ಕೊಟ್ಟಿದ್ದಾರೆ.
ಇದನ್ನು ಗಮನಿಸಿ:
"ಪ್ರತಿಯೊಂದು ಮಗುವೂ ಹುಟ್ಟುತ್ತಲೆ ವಿಶ್ವಮಾನವ. ಬೆಳೆಯುತ್ತಾ ನಾವು ಅದನ್ನು ಅಲ್ಪಮಾನವನನ್ನಾಗಿ ಮಾಡುತ್ತೇವೆ. ಮತ್ತೆ ಅದನ್ನು ವಿಶ್ವಮಾನವನನ್ನಾಗಿ ಮಾಡುವುದೇ ವಿದ್ಯೆಯ ಕರ್ತವ್ಯವಾಗಬೇಕು. ಹುಟ್ಟುವಾಗ ವಿಶ್ವಮಾನವನಾಗಿಯೆ ಹುಟ್ಟಿದ ಮಗುವನ್ನು ನಾವು ದೇಶ, ಭಾಷೆ, ಮತ, ಜಾತಿ, ಜನಾಂಗ, ವರ್ಣ ಇತ್ಯಾದಿ ಉಪಾಧಿಗಳಿಂದ ಬದ್ಧನನ್ನಾಗಿ ಮಾಡುತ್ತೇವೆ. ಅವೆಲ್ಲವುಗಳಿಂದ ಪಾರಾಗಿ ಅವನನ್ನು ಬುದ್ಧನನ್ನಾಗಿ ಪರಿವರ್ತಿಸುವುದೆ ನಮ್ಮ ವಿದ್ಯೆ , ಸಂಸ್ಕೃತಿ, ನಾಗರಿಕತೆ ಎಲ್ಲದರ ಆದ್ಯ ಕರ್ತವ್ಯವಾಗಬೇಕು. ಪ್ರಪಂಚದ ಮಕ್ಕಳೆಲ್ಲ ಅನಿಕೇತನರಾಗಬೇಕು, ಲೋಕ ಉಳಿದು ಬಾಳಿ ಬದುಕಬೇಕಾದರೆ ! ಮಾನವನ ವಿಕಾಸದ ಹಾದಿಯಲ್ಲಿ ಆಯಾ ಕಾಲದ ಅಗತ್ಯವನ್ನು ಪೂರೈಸಲು ಮಹಾಪುರುಷರು ಸಂಭವಿಸಿ ಹೋಗಿದ್ದಾರೆ. ಅವರಲ್ಲಿ ಕೆಲವರ ವಾಣಿ ವಿಶಿಷ್ಟ ಧರ್ಮವಾಗಿ ರೂಪುಗೊಂಡು ಕಡೆಗೆ ಮತವಾಗಿ ಪರಿಮಿತವಾಯಿತು. ಮಾನವರನ್ನು ಕೂಡಿಸಿ ಬಾಳಿಸಬೇಕೆಂಬ




ಸದುದ್ದೇಶದಿಂದ ಹುಟ್ಟಿಕೊಂಡ ಮಹಾತ್ಮರ ವಾಣಿ ಮತವಾಗಿ ಮಾದಕವಾಯಿತು. ಒಂದು ಯುಗಕ್ಕೆ ಅಗತ್ಯವೆನಿಸಿದ ಧರ್ಮ ಕಾಲಾನುಕಾಲಕ್ಕೆ ಮತವಾಗಿ ನಿರುಪಯುಕ್ತವೆನಿಸಿ ಮತ್ತೊಂದು ಹೊಸ ಧರ್ಮಕ್ಕೆ ಎಡೆ ಕೊಟ್ಟುದೂ ಉಂಟು. ಹೀಗಾಗಿ ಅನೇಕ ಧರ್ಮಗಳು ಮತಗಳಾಗಿ ಜನತೆಯನ್ನು ಗುಂಪು ಗುಂಪಾಗಿ ಒಡೆದಿವೆ; ಯುದ್ಧಗಳನ್ನು ಹೊತ್ತಿಸಿವೆ ಜಗತ್ತಿನ ಕ್ಷೋಭೆಗಳಿಗೆಲ್ಲಾ ಮೂಲ ಕಾರಣವೆಂಬಂತೆ ! ವಿಜ್ಞಾನ ಯುಗದ ಪ್ರಾಯೋಗಿಕ ದೃಷ್ಟಿಗೆ ಇನ್ನು ಮೇಲೆ ಮತಮೌಢ್ಯದ ಒಪ್ಪಿಗೆಯಾಗದು. ವಿನೋಬಾ ಭಾವೆಯವರು ಹಿಂದೆ ಹೇಳಿದಂತೆ ಮತ ಮತ್ತು ರಾಜಕೀಯದ ಕಾಲ ಆಗಿ ಹೋಯಿತು. ಇನ್ನೇನಿದ್ದರೂ ಅಧ್ಯಾತ್ಮ ಮತ್ತು ವಿಜ್ಞಾನದ ಕಾಲ ಬರಬೇಕಾಗಿದೆ
ಮನುಜಮತ, ವಿಶ್ವಪಥ, ಸರ್ವೋದಯ, ಸಮನ್ವಯ, ಪೂರ್ಣದೃಷ್ಟಿ – ಈ. ಪಂಚಮಂತ್ರ ಇನ್ನು ಮುಂದಿನ ದೃಷ್ಟಿಯಾಗ ಬೇಕಾಗಿದೆ. ಅಂದರೆ ನಮಗೆ ಇನ್ನು ಬೇಕಾದುದು ಆ ಮತ ಈ ಮತ ಅಲ್ಲ ; ಮನುಜಮತ. ಆ ಪಥ ಈ ಪಥ ಅಲ್ಲ ; ವಿಶ್ವಪಥ. ಆ ಒಬ್ಬರ ಈ ಒಬ್ಬರ ಉದಯವಲ್ಲ ; ಸರ್ವರ ಸರ್ವಸ್ತರದ ಉದಯ. ಪರಸ್ಪರ ವಿಮುಖವಾಗಿ ಸಿಡಿದು ಹೋಗುವುದಲ್ಲ ; ಸಮನ್ವಯಗೊಳ್ಳುವುದು. ಮಿತಮತದ ಆಂಶಿಕ ದೃಷ್ಟಿಯಲ್ಲ ; ಭೌತಿಕ ಪಾರಮಾರ್ಥಿಕ ಎಂಬ ಭಿನ್ನ ದೃಷ್ಟಿಯಲ್ಲ ; ಎಲ್ಲವನ್ನೂ ಭಗವದ್ ದೃಷ್ಟಿಯಿಂದ ಕಾಣುವ ಪೂರ್ಣದೃಷ್ಟಿ.
ಯಾವ ಭಾವನೆಗಳು ಜಗತ್ತಿನಲ್ಲಿ ಎಲ್ಲ ಮಾನವರಿಗೂ ಅನ್ವಯವಾಗಬಹುದೋ ಅಂತಹ ಭಾವನೆ ಅಂತಹ ದೃಷ್ಟಿ .... ಬರಿಯ ಯಾವುದೋ ಒಂದು ಜಾತಿಗೆ, ಒಂದು ಮತಕ್ಕೆ , ಗುಂಪಿಗೆ, ಒಂದು ದೇಶಕ್ಕೆ ಮಾತ್ರ ಅನ್ವಯವಾಗುವುದಿಲ್ಲ. ಸರ್ವಕಾಲಕ್ಕೂ ಅನ್ವಯವಾಗುವ ಇವು ಮೂಲ ಮೌಲ್ಯಗಳು. ಈ ಮೌಲ್ಯಗಳು ಮಾನವರನ್ನು ಕೂಡಿಸಿ ಬಾಳಿಸುವತ್ತ ನಡೆದಾವು. ಗುಂಪುಗಾರಿಕೆಗೆಂದೂ ಇವು ತೊಡಗುವುದಿಲ್ಲ. ಅದೇನಿದ್ದರೂ ರಾಜಕೀಯದ ಕರ್ಮ. ವ್ಯಕ್ತಿ ಸ್ವಾತಂತ್ರ್ಯವನ್ನು ನೀಡಿಯೂ ಸಮಷ್ಟಿಯ ಉದ್ಧಾರದ ದೃಷ್ಟಿ ಇದರದು. ಈ ದೃಷ್ಟಿಗೆ ವ್ಯಕ್ತಿಗಳೆಷ್ಟೋ ಅಷ್ಟೂ ವ್ಯಕ್ತಿಗಳು ಸಮಷ್ಟಿಯ ವಿಕಾಸಕ್ಕೆ ಸಾಧಕವಾಗುವುದೂ ಸಾಧ್ಯ. ಈ 'ದರ್ಶನ' ವನ್ನೆ ವಿಶ್ವಮಾನವ ಗೀತೆ ಸಾರುತ್ತದೆ" – ಕುವೆಂಪು
ಮೇಲ್ಕಂಡ ಕುವೆಂಪು ವಿವರಣೆಯಲ್ಲಿ ಪಂಚಮಂತ್ರಗಳ ಸ್ವರೂಪ, ಉದ್ದೇಶ ಮತ್ತು ಅರ್ಥವ್ಯಾಪ್ತಿಯು ಅಡಗಿದೆ. ಇಲ್ಲಿ




ಮುಖ್ಯವಾಗಿ ಗಮನಿಸಬೇಕಾದ್ದು ಮಾನವನಿರ್ಮಿತಗಳು (ಒಚಿಟಿ ಟಚಿಜಜ) ಮತ್ತು ನೈಸರ್ಗಿಕ ನೆಲೆ. ಮಾನವನಿರ್ಮಿತಗಳು ಯಾವುವು ? ನೈಸರ್ಗಿಕವಾದುದು ಯಾವುದು ? ಎಂದು ಅರಿತುಕೊಂಡರೆ ಅದೇ ಉನ್ನತ ಶಿಕ್ಷಣ ಎಂದು ಹೇಳಬಹುದು. ಮಾನವನಿರ್ಮಿತಗಳಾದ ಜಾತಿ ಜನಾಂಗ ಮತಧರ್ಮ ದೇಶ ಭಾಷೆ ಕಾಲ ಲಿಂಗ ಮೈಬಣ್ಣ ಮುಂತಾದ ಸಕಲವಿಧವಾದ ಭೇದ ಭಾವಗಳು ಮತ್ತು ತಾರತಮ್ಯಗಳೆಲ್ಲವೂ ಸೇರಿ ಒಂದು ಖೆಡ್ಡಾರಚನೆ ಎನಿಸುತ್ತದೆ. ಈ ಖೆಡ್ಡಾ ರಚನೆಯನ್ನೇ ಕುವೆಂಪು ಅವರು "ಉಪಾಧಿ" ಎಂದು ಕರೆದಿದ್ದಾರೆ ( ಆಧಿ = ಮಾನಸಿಕ ರೋಗಗಳು). ಇಂಥ ಖೆಡ್ಡಾದಲ್ಲಿ ಬೀಳದೆ ಅಂತರತಮಗುರುವಿನ ಅರಿವಿನಲ್ಲಿ ಮುನ್ನಡೆಯುತ್ತಾ ನೈಸರ್ಗಿಕ ನೆಲೆಗಳತ್ತ ಚಲಿಸುವುದೇ ಸುಜ್ಞಾನಪ್ರಕಾಶ.
ಮಾನವನಿರ್ಮಿತ ಖೆಡ್ಡಾ ರಚನೆಯೇ ನಿಕೇತನಗಳು. ನಮ್ಮ ಚೇತನವು ನಿಕೇತನಗಳಿಗೆ ಕಟ್ಟುಬೀಳದೆ ಅನಿಕೇತನ ಆಗಬೇಕು ಎಂಬ ಆಶಯ ವಿಶ್ವಮಾನವ ಗೀತೆಯಲ್ಲಿದೆ. ಇದೇ ಸಂದರ್ಭದಲ್ಲಿ ವಿಶ್ವಮಾನವ > ವಿಶ್ವಧರ್ಮ > ವಿಶ್ವಮಾತೆ ಎಂಬ ಕ್ರಮಪರಿಣಾಮ ಪ್ರಕ್ರಿಯೆಯನ್ನು ಅರಿತುಕೊಳ್ಳಬೇಕು:

### ವಿಶ್ವಮಾನವ > ವಿಶ್ವಧರ್ಮ > ವಿಶ್ವಮಾತೆ ಕುರಿತು

ವಿಶ್ವಮಾನವ, ವಿಶ್ವಧರ್ಮ, ವಿಶ್ವಮಾತೆ ಎಂಬುದು ವಾಮನನ ಮೂರು ಹೆಜ್ಜೆ ಇದ್ದಂತೆ. ವಾಮನ ಮೊದಲ ಹೆಜ್ಜೆಯಲ್ಲಿ ಇಡೀ ಭೂಮಿಯನ್ನು ಅಳೆಯುತ್ತಾನೆ. ಎರಡನೇ ಹೆಜ್ಜೆಯಲ್ಲಿ ಇಡೀ ಆಕಾಶವನ್ನು ಅಳೆಯುತ್ತಾನೆ. ಮೂರನೇ ಹೆಜ್ಜೆಯನ್ನು ಬಲಿ ಚಕ್ರವರ್ತಿಯ ತಲೆಯ ಮೇಲಿಟ್ಟು ಪಾತಾಳಕ್ಕೆ ತುಳಿಯುತ್ತಾನೆ. ಇದು ವಾಮನನ ತ್ರಿವಿಕ್ರಮಾವತಾರ.
ಮಾನವಕುಲ ಒಂದಾಗಿ ಬದುಕಲು ಮೊದಲಿಗೆ ವಿಶ್ವಮಾನವ ಆಗಬೇಕು. ವಿಶ್ವಮಾನವರಾಗಿ ಅತ್ಯುನ್ನತಿ ಸಾಧಿಸಲು ವಿಶ್ವಧರ್ಮ ಪಾಲಿಸಬೇಕು. ವಿಶ್ವಧರ್ಮ ದೃಷ್ಟಿ ಬೆಳೆಸಿಕೊಂಡವರು ವಿಶ್ವಮಾತೆಯ ಕಮಲಗರ್ಭ ಪರಾಗ ಸಂಜಾತರಾಗುವರು.. ಬಲಿ ಚಕ್ರವರ್ತಿಯನ್ನು ಪಾತಾಳಕ್ಕೆ ತುಳಿಯುವಂತೆಯೇ ಪಿತೃ ಪ್ರಾಧಾನ್ಯತೆಯನ್ನು ನಾವು ಪಾತಾಳಕ್ಕೆ ತುಳಿಯಬೇಕು. ಇಲ್ಲಿ ಗಮನಿಸಬೇಕಾದ ಅಂಶವೆಂದರೆ ವಾಮನನ ಮೂರು ಹೆಜ್ಜೆಗಳ ರೀತಿ, ಇಡೀ ಮಾನವಕುಲ ಒಂದಾಗಿ ತಾವಿರುವ ಕಡೆಯೇ ವಿಶ್ವಮಾನವರಾಗಿ, ವಿಶ್ವಧರ್ಮ ಪ್ರಸಾರಕರಾಗಿ ವಿಶ್ವಮಾತೆಯ ಗರ್ಭಸ್ಥ ಶಿಶುಗಳಾಗಬೇಕು. ಇದೇ ಪಂಚಮಂತ್ರದ ತಿರುಳುವಿಚಾರ.

## ಕುವೆಂಪು ಅವರ ಜೀವನ ಹುಟ್ಟು ಬೆಳವಣಿಗೆ

ಕುವೆಂಪು, ಕುಪ್ಪಳಿ ವೆಂಕಟಪ್ಪ ಪುಟ್ಟಪ್ಪ (ಡಿಸೆಂಬರ್ 29, 1904 – ನವೆಂಬರ್ 11, 1994), ಕನ್ನಡದ ಅಗ್ರಮಾನ್ಯ ಕವಿ, ಕಾದಂಬರಿಕಾರ, ನಾಟಕಕಾರ, ವಿಮರ್ಶಕ ಮತ್ತು ಚಿಂತಕರಾಗಿದ್ದರು. ಇಪ್ಪತ್ತನೆಯ ಶತಮಾನ ಕಂಡ ದೈತ್ಯ ಪ್ರತಿಭೆ. ವರಕವಿ ಬೇಂದ್ರೆಯವರಿಂದ 'ಯುಗದ ಕವಿ ಜಗದ ಕವಿ' ಎನಿಸಿಕೊಂಡವರು. ವಿಶ್ವಮಾನವ ಸಂದೇಶ ನೀಡಿದವರು.ಕನ್ನಡದಎರಡನೆಯ'ರಾಷ್ಟ್ರಕವಿ.ಜ್ಞಾನಪೀಠಪ್ರಶಸ್ತಿಯನ್ನೂ, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿಯನ್ನೂ ಮೊದಲ ಬಾರಿಗೆ ಕನ್ನಡಕ್ಕೆ ತಂದುಕೊಟ್ಟವರು. ಕರ್ನಾಟಕ ಸರ್ಕಾರ ಕೊಡಮಾಡುವ ಕರ್ನಾಟಕ ರತ್ನ ಪ್ರಶಸ್ತಿ ಹಾಗೂ ಪಂಪ ಪ್ರಶಸ್ತಿಗಳನ್ನು ಮೊದಲ ಬಾರಿಗೆ ಪಡೆದವರು.
ಜೀವನ ಬಾಲ್ಯ
ಕುವೆಂಪು ಅವರು ತಮ್ಮ ತಾಯಿಯ ತವರೂರಾದ ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ತಾಲ್ಲೂಕಿನ ಹಿರೇಕೊಡಿಗೆ ಎಂಬಲ್ಲಿ ಡಿಸೆಂಬರ್ 29, 1904 ರಲ್ಲಿ ಜನಿಸಿದರು. ತಂದೆ ವೆಂಕಟಪ್ಪ; ತಾಯಿ ಸೀತಮ್ಮ. ಅವರ ಬಾಲ್ಯ ತಮ್ಮ ತಂದೆಯ ಊರಾದ ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನ ಕುಪ್ಪಳಿಯಲ್ಲಿ ಕಳೆಯಿತು.
ಶಿ ಕ ್ಷ ಣ
ಕುವೆಂಪು ಅವರ ಆರಂಭಿಕ ವಿದ್ಯಾಭ್ಯಾಸ ಕೂಲಿಮಠದಲ್ಲಿ ಆಯಿತು. ಮಾಧ್ಯಮಿಕ ಶಿಕ್ಷಣ ತೀರ್ಥಹಳ್ಳಿಯಲ್ಲಿ ನಡೆಯಿತು. ನಂತರ ಮೈಸೂರಿನ ವೆಸ್ಲಿಯನ್ ಮಿಷನ್ ಹೈಸ್ಕೂಲಿನಲ್ಲಿ ತಮ್ಮ ಶಿಕ್ಷಣ ಮುಂದುವರಿಸಿದರು. ಮೈಸೂರಿನ ಮಹಾರಾಜ ಕಾಲೇಜಿನಿಂದ ಬಿ.ಎ. ಪದವಿಯನ್ನೂ, ಕನ್ನಡದಲ್ಲಿ ಎಂ. ಎ. ಪದವಿಯನ್ನೂ ಪಡೆದರು. ಟಿ. ಎಸ್. ವೆಂಕಣ್ಣಯ್ಯನವರು ಇವರಿಗೆ ಗುರುಗಳಾಗಿದ್ದರು.
ವ ೃ ತ್ತಿ ಜೀ ವ ನ
ಕುವೆಂಪು ಅವರು ಮೈಸೂರಿನ ಮಹಾರಾಜ ಕಾಲೇಜಿನ ಪ್ರಾಧ್ಯಾಪಕರೂ, ಪ್ರಾಂಶುಪಾಲರೂ ಆಗಿದ್ದರು. ನಂತರ ಉಪಕುಲಪತಿಗಳಾದರು[4]. ತಮ್ಮ ಕಲ್ಪನೆಯ ಕೂಸಾದ ಮಾನಸ ಗಂಗೋತ್ರಿಯನ್ನು ಕಟ್ಟಿ ಬೆಳೆಸಿದರು. ವಿಶ್ವವಿದ್ಯಾನಿಲಯವನ್ನು ಅಧ್ಯಯನಾಂಗ, ಸಂಶೋಧನಾಂಗ ಹಾಗೂ ಪ್ರಸಾರಾಂಗ ಎಂಬುದಾಗಿ ವಿಭಾಗಿಸಿದರು. ಕಡಿಮೆ ಅವಧಿಯಲ್ಲಿ ಕನ್ನಡದಲ್ಲಿ ಪಠ್ಯಪುಸ್ತಕಗಳನ್ನು ಬರೆಸಿ ಕನ್ನಡ ಮಾಧ್ಯಮದ ತರಗತಿಗಳನ್ನು ಆರಂಭಿಸಿದರು.
ವೈವಾಹಿಕ ಜೀವನ
'ಉದಯರವಿ', ಒಂಟಿಕೊಪ್ಪಲ್, ಮೈಸೂರು
ಕುವೆಂಪು ಅವರು ಹೇಮಾವತಿ ಅವರನ್ನು ವಿವಾಹವಾದರು. ಪೂರ್ಣಚಂದ್ರ ತೇಜಸ್ವಿ, ಕೋಕಿಲೋದಯ ಚೈತ್ರ, ಇಂದುಕಲಾ ಹಾಗೂ ತಾರಿಣಿ ಅವರ ಮಕ್ಕಳು. ಪೂರ್ಣಚಂದ್ರ ತೇಜಸ್ವಿ ಅವರು ಕನ್ನಡದ ಅಗ್ರಮಾನ್ಯ ಸಾಹಿತಿಗಳಲ್ಲಿ ಒಬ್ಬರಾಗಿದ್ದಾರೆ. ಕೋಕಿಲೋದಯ ಚೈತ್ರ ಅವರು ಇಂಜಿನಿಯರ್ ಆಗಿ ಆಸ್ಟ್ರೇಲಿಯಾದಲ್ಲಿ ನೆಲೆಸಿದ್ದಾರೆ. ಚಿದಾನಂದಗೌಡ ಅವರು ಕುವೆಂಪು ಅವರ ಅಳಿಯ.
ನಿ ದ ನ
ಕುವೆಂಪು ಅವರು ನವೆಂಬರ್ 11, 1994ರಂದು ಮೈಸೂರಿನಲ್ಲಿ ನಿಧನರಾದರು. ತಮ್ಮ ಹುಟ್ಟೂರಾದ ಕುಪ್ಪಳಿಯಲ್ಲಿ ಅವರ ಅಂತ್ಯಸಂಸ್ಕಾರವನ್ನು ನೆರವೇರಿಸಲಾಯಿತು. ಕುಪ್ಪಳಿಯಲ್ಲಿರುವ ಅವರ ಸಮಾಧಿ ಒಂದು ಸ್ಮಾರಕವಾಗಿದೆ.
ಸಾಹಿತ್ಯ ಕೃಷಿ
ಕುವೆಂಪು ಅವರು 20ನೆಯ ಶತಮಾನ ಕಂಡ ದೈತ್ಯ ಪ್ರತಿಭೆ. ಅವರೊಬ್ಬ ರಸಋಷಿ. ತಮ್ಮ ಮೇರು ಕೃತಿ 'ಶ್ರೀ ರಾಮಾಯಣ ದರ್ಶನಂ'ನಲ್ಲಿ ಈ ಕಾಲಕ್ಕೆ ಅಗತ್ಯವಾದ ದರ್ಶನವನ್ನು ನೀಡಿದ್ದಾರೆ. ಅವರ ಎರಡು ಬೃಹತ್ ಕಾದಂಬರಿಗಳಾದ 'ಕಾನೂರು ಹೆಗ್ಗಡತಿ' ಹಾಗೂ 'ಮಲೆಗಳಲ್ಲಿ ಮದುಮಗಳು' ಅವರನ್ನುಜಗತ್ತಿನಮಹಾನ್ ಕಾದಂಬರಿಕಾರರಸಾಲಿನಲ್ಲಿ ನಿಲ್ಲುವಂತೆ ಮಾಡಿವೆ. ಅವರ ನಾಟಕಗಳಿಗೆ ವೈಚಾರಿಕತೆಯ ಸ್ಪರ್ಶವಿದೆ.

## ಕವನ ಸಂಕಲನಗಳು

ಕೊಳಲು (1930)
ಪಾಂಚಜನ್ಯ (1933)
ನವಿಲು (1934)
ಕಲಾಸುಂದರಿ (1934)
ಕಥನ ಕವನಗಳು (1937)
ಕೋಗಿಲೆ ಮತ್ತು ಸೋವಿಯಟ್ ರಷ್ಯಾ (1944)
ಪ್ರೇಮ ಕಾಶ್ಮೀರ (1946)
ಅಗ್ನಿಹಂಸ (1946)
ಕೃತ್ತಿಕೆ (1946)
ಪಕ್ಷಿಕಾಶಿ (1946)
ಕಿಂಕಿಣಿ (ವಚನ ಸಂಕಲನ) (1946)
ಷೋಡಶಿ (1946)
ಚಂದ್ರಮಂಚಕೆ ಬಾ ಚಕೋರಿ (1957)
ಇಕ್ಷುಗಂಗೋತ್ರಿ (1957)
ಅನಿಕೇತನ (1963)
ಜೇನಾಗುವ (1964)
ಅನುತ್ತರಾ (1965)
ಮಂತ್ರಾಕ್ಷತೆ (1966)
ಕದರಡಕೆ (1967)
ಪ್ರೇತಕ್ಯೂ (1967)
ಕುಟೀಚಕ (1967)
ಹೊನ್ನ ಹೊತ್ತಾರೆ (1976)
ಕೊನೆಯ ತೆನೆ ಮತ್ತು ವಿಶ್ವಮಾನವ ಸಂದೇಶ (1981)

### ಕಥಾ ಸಂಕಲನ

ಸಂನ್ಯಾಸಿ ಮತ್ತು ಇತರ ಕಥೆಗಳು (1936)
ನನ್ನ ದೇವರು ಮತ್ತು ಇತರ ಕಥೆಗಳು (1940)
ಕಾದಂಬರಿಗಳು
ಕಾನೂರು ಹೆಗ್ಗಡತಿ (1936)
ಮಲೆಗಳಲ್ಲಿ ಮದುಮಗಳು (1967)

### ನಾಟಕಗಳು

ಯಮನ ಸೋಲು (1928)
ಜಲಗಾರ (1928)
ಬಿರುಗಾಳಿ (1930)
ವಾಲ್ಮೀಕಿಯ ಭಾಗ್ಯ (1931)
ಮಹಾರಾತ್ರಿ (1931)
ಸ್ಮಶಾನ ಕುರುಕ್ಷೇತ್ರಂ (1931)
ರಕ್ತಾಕ್ಷಿ (1933)
ಶೂದ್ರ ತಪಸ್ವಿ (1944)
ಬೆರಳ್‌ಗೆ ಕೊರಳ್ (1947)
ಬಲಿದಾನ (1948)
ಚಂದ್ರಹಾಸ (1963)
ಕಾನೀನ (1974)

### ಪ್ರಬಂಧ

ಮಲೆನಾಡಿನ ಚಿತ್ರಗಳು (1933)

### ವಿಮರ್ಶೆ

ಕಾವ್ಯವಿಹಾರ (1946)
ತಪೋನಂದನ (1950)
ವಿಭೂತಿಪೂಜೆ (1953)
ದ್ರೌಪದಿಯ ಶ್ರೀಮುಡಿ (1960)
ರಸೋ ವೈ ಸಃ (1963)
ಇತ್ಯಾದಿ (1970)

### ಆತ್ಮಕಥೆ

ನೆನಪಿನ ದೋಣಿಯಲ್ಲಿ: ಕುವೆಂಪು ಮದುವೆ ಪ್ರಸಂಗ
ಜೀವನ ಚರಿತ್ರೆಗಳು
ಸ್ವಾಮಿ ವಿವೇಕಾನಂದ
ರಾಮಕೃಷ್ಣ ಪರಮಹಂಸ

## ಕುವೆಂಪು ಅವರು ರೂಪಿಸಿದ 'ಮಂತ್ರ ಮಾಂಗಲ್ಯ' ಎಂಬ ಸರಳ ವಿವಾಹ ಪದ್ಧತಿ ಬಗ್ಗೆ

ಜೀವನದ ಅತ್ಯಂತ ಪವಿತ್ರ ಬಂಧಕ್ಕೆ ಸಾಕ್ಷಿಯಾಗುವ ಕಾರ್ಯವನ್ನು ದುಂದು ವೆಚ್ಚ ಮಾಡದೆ ಅತ್ಯಂತ ಸರಳವಾಗಿ ಮತ್ತು ಖಾಸಗಿಯಾಗಿ




ಆಚರಿಸುವುದಕ್ಕಾಗಿ ರಾಷ್ಟ್ರ ಕವಿ ಕುವೆಂಪು ರೂಪಿಸಿದ ಸೂತ್ರವೇ ಮಂತ್ರ ಮಾಂಗಲ್ಯ ಎಂಬ ವಿವಾಹ ವ್ಯವಸ್ಥೆ. ಈ ಮಾದರಿಯ ವಿವಾಹದಲ್ಲಿ ಸಾಂಪ್ರದಾಯಿಕ ವಿವಾಹ ವಿಧಿಗಳಿರುವುದಿಲ್ಲ ಹೆಚ್ಚೆಂದರೆ ಒಂದು ತಾಳಿ ಕಟ್ಟಿಸಿಕೊಳ್ಳುವ ಪ್ರಕ್ರಿಯೆ.ಇದರ ಹೊರತಾಗಿ ಗಂಡು–ಹೆಣ್ಣು ತಮ್ಮ ನಡುವೆ ಯಾವುದೇ ಭೇದವಿಲ್ಲ ಎನ್ನುತ್ತಾ ಗರಿಷ್ಠ 200ಕ್ಕಿಂತ ಕಡಿಮೆ ಸಂಖ್ಯೆಯ ಬಂಧು ಬಾಂಧವರು ನಡುವೆ ಮನೆಯಲ್ಲೇ ಸರಳವಾಗಿ ವಿವಾಹವಾಗುವುದು. ಇದಕ್ಕೆ 21 ಪ್ರತಿಜ್ಞಾವಿಧಿಗಳಿರುತ್ತವೆ, ಅವುಗಳನ್ನು ಸ್ವೀಕರಿಸಿ , ಬಳಿಕ ವಿವಾಹ ರಿಜಿಸ್ಟರ್ ಮಾಡಿಸಿಕೊಳ್ಳುವುದು.
ಈ ಮೂಲಕ 1966 ರಲ್ಲಿ ಕುವೆಂಪು ಪುತ್ರ ಪೂರ್ಣ ಚಂದ್ರ ತೇಜಸ್ವಿ ರಾಜೇಶ್ವರಿ ಅವರ ವಿವಾಹದಿಂದ ಆರಂಭಿಸಿ, ತೀರ ಇತ್ತೀಚಿಗೆ ನಟಿ ಪೂಜಾ ಗಾಂಧಿ, ಚಾಮರಾಜನಗರ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಮುಂತಾದವರ ಸಾಲಿನಲ್ಲಿ ಈ ನೂತನ ವಧು–ವರರೂ ತಮ್ಮ ವೈವಾಹಿಕ ಬದುಕಿಗೆ ಕಾಲಿಟ್ಟರು.
ಕುವೆಂಪು ಅವರು ಬರೆದಿರುವ ಪತ್ರವನ್ನು ಕೊನೆಯಲ್ಲಿ ಲಗತ್ತಿಸಲಾಗಿದೆ.
ಮದುವೆಯ ಸೂತ್ರಧಾರರಾದ ಪುರೋಹಿತರನ್ನು ಹೊರಗಿಡುವುದು ಮತ್ತು ಆಡಂಬರದ ಪ್ರದರ್ಶನವನ್ನು ತ್ಯಜಿಸಿ ಸರಳವಾಗಿರುವುದು ಮಂತ್ರ ಮಾಂಗಲ್ಯ ವಿವಾಹ ಪದ್ಧತಿಯ ಮುಖ್ಯ ನೀತಿ ಸಂಹಿತೆಯಾಗಿದೆ. ಮದುವೆ ಎಂದರೆ ಬಜೆಟ್ ಎಷ್ಟು ಎಂಬಲ್ಲಿಂದ , ಪ್ರಿ ವೆಡ್ಡಿಂಗ್ ಶೂಟ್, ಪೋಸ್ಟ್ ವೆಡ್ಡಿಂಗ್ ಶೂಟ್, ಪ್ರೀ ವೆಡ್ಡಿಂಗ್ ಪ್ರವಾಸ, ಹನಿಮೂನ್ ಗೆ ವಿದೇಶ ಪ್ರವಾಸ – ಇವೆಲ್ಲ ಅನಿವಾರ್ಯ ಎಂಬಷ್ಟರ ಮಟ್ಟಿಗೆ ಸಾಮಾಜಿಕ ಬದಲಾವಣೆಯಾಗಿ ಬಿಟ್ಟಿದೆ. ಉಳ್ಳವರಿಗೆ ಇದು ಅಂತಸ್ತು ತೋರಿಸುವ ಹಂಬಲ. ಇಂಥ ಸಂದರ್ಭದಲ್ಲಿ ಸ್ವತಃ ಪ್ರಧಾನಿ ಅವರೇ ಈ ದೇಶದಲ್ಲೇ ಮದುವೆಯಾಗಿ ಅಂತ ಕರೆ ನೀಡುವವರೆಗೂ ವೈವಾಹಿಕ ಉದ್ಯಮವು ಬೃಹತ್ ಆಗಿ ಬೆಳೆದುಬಿಟ್ಟಿದೆ. ಮನೆಯಲ್ಲೇ ಮದುವೆಯಾಗುವುದೇ ? ಎಂಬ ಪ್ರಶ್ನೆ ಕೇಳುವವರೇ ಇರುವವರ ನಡುವೆ ಯುವ ಜನಾಂಗವು ಅದ್ದೂರಿತನ ಪ್ರದರ್ಶಿಸಿರುವ ಮತ್ತು ಬದುಕಿಗೆ ಅನಿವಾರ್ಯವಾಗಿರುವ ನೀತಿ ಸೂತ್ರಗಳೊಂದಿಗೆ ಸರಳ ವಿವಾಹದತ್ತ ಆಕರ್ಷಿತರಾಗುತ್ತಿರುವುದು ಈ ಕಾಲದ ಬದಲಾವಣೆ.

### ಕುವೆಂಪು ಅವರ ಮಂತ್ರ ಮಾಂಗಲ್ಯ :

ವಿವಾಹ ಸಂಹಿತೆ




ಶ್ರೀಯುತ ..ಎಂಬ ವರನೇ
ಶ್ರೀಮತಿ ಎಂಬ ವಧುವೇ
ನಿಮ್ಮಿಬ್ಬರ ವಿವಾಹದ ಈ ಸಂದರ್ಭದಲ್ಲಿ ಈ ಕೆಲವು ಮೂಲಭೂತ ಸ್ವಾತಂತ್ರ್ಯದ ಸಂದೇಶಗಳನ್ನು ತಿಳಿಸಿದ್ದೇವೆ. ದಯವಿಟ್ಟು ನೀವಿಬ್ಬರೂ ಗಮನವಿಟ್ಟು ಕೇಳಿಕೊಳ್ಳಿರಿ.
ಈ ದಿನ ಇಲ್ಲಿ ಈ ರೀತಿ ಮದುವೆಯಾಗುವುದರ ಮೂಲಕ ನೀವು ನಿಮ್ಮ ಎಲ್ಲ ಮಾನಸಿಕ ಮತ್ತು ಆಧ್ಯಾತ್ಮಿಕ ಸಂಕೋಲೆ ಮತ್ತು ದಾಸ್ಯಗಳಿಂದ ವಿಮುಕ್ತರಾಗಿ ಸ್ವತಂತ್ರರಾಗುತ್ತಿದ್ದೀರಿ.
ನೀವು ಇನ್ನು ಈ ಭೂಮಂಡಲದ ಯಾವುದೇ ಜಾತಿ ಮತ್ತು ಜನಾಂಗಗಳಿಗಿಂತ ಮೇಲಾದವರಲ್ಲ.
ಹಾಗೆಯೇ ಯಾವುದೇ ಜಾತಿ ಮತ್ತು ಜನಾಂಗಗಳಿಗಿಂತ ಕೀಳಾದವರೂ ಅಲ್ಲ.
ನಿಮ್ಮನ್ನು ಇಂದು ಮನುಷ್ಯ ಸಮಾಜದ ಎಲ್ಲ ಕೃತಕ ಜಾತಿಗಳಿಂದ ಮುಕ್ತರನ್ನಾಗಿ ಮಾಡಿದ್ದೇವೆ.
ನಿಮ್ಮನ್ನು ಇಂದು ಎಲ್ಲಾ ಸಂಕುಚಿತ ಮತಧರ್ಮಗಳಿಂದ ಮುಕ್ತರನ್ನಾಗಿ ಮಾಡಿದ್ದೇವೆ.
ನಿಮ್ಮನ್ನು ಎಲ್ಲ ಆಚಾರ ಸಂಪ್ರದಾಯಗಳಿಂದ ಮುಕ್ತರನ್ನಾಗಿ ಮಾಡಿದ್ದೇವೆ.
ನಿಮ್ಮನ್ನು ಎಲ್ಲಾ ಅಸತ್ಯ ಮತ್ತು ಮೂಢನಂಬಿಕೆಗಳಿಂದ ಮುಕ್ತರನ್ನಾಗಿ ಮಾಡಿದ್ದೇವೆ.
ಮನುಷ್ಯನ ಜೀವಿತ ಕಾಲವೇ ಒಂದು ಸುಮುಹೂರ್ತ, ಇದರೊಳಗೆ ನೀನು ಬೇರೆ ಸುಮುಹೂರ್ತಗಳನ್ನೂ, ರಾಹುಕಾಲ, ಗುಳಿಕಕಾಲಗಳನ್ನೂ ನೋಡುವ ಅಗತ್ಯವಿಲ್ಲ. ಕಾಲವು ನಿರ್ಗುಣ.
ಎಂದೂ ಸಂಪಾದಿಸಲು, ಸೃಷ್ಟಿಸಲು, ಕೂಡಿಡಲು ಸಾಧ್ಯವೇ ಇಲ್ಲದ, ಮನುಷ್ಯನ ಜೀವಿತಕಾಲದ ಪ್ರತಿ ಕ್ಷಣವೂ ಅತ್ಯಮೂಲ್ಯ. ಯಾರು




ಈ ಸತ್ಯವನ್ನು ಅರೆಯುತ್ತಾರೋ ಅವರು ತಮ್ಮ ಕರ್ತವ್ಯ ಮತ್ತು ನಡವಳಿಕೆಗಳಿಂದ ಕಾಲವನ್ನು ಒಳ್ಳೆಯ ಅಥವಾ ಕೆಟ್ಟ ಕಾಲವನ್ನಾಗಿ ಪರಿವರ್ತಿಸಬಲ್ಲರು.
ನೀವು ಯಾವುದೇ ಮನೆದೇವರು ಅಥವಾ ಕುಲದೇವರುಗಳ ಅಡಿಯಾಳಾಗಿ ಬದುಕಬೇಕಾಗಿಲ್ಲ. ಮನುಷ್ಯ ಸಮಾಜದ ಮಾನವೀಯ ಮೌಲ್ಯಗಳೇ ಮನುಷ್ಯನ ಮೊದಲನೆಯ ಹಾಗೂ ಕೊನೆಯ ದೇವರು. ಮಾನವರೆಲ್ಲರೂ ಸಮಾನರು. ಪುರುಷನು ಸ್ತ್ರೀಗಿಂತ ಮೇಲು ಎಂದು ಹೇಳುವ ಎಲ್ಲ ಧರ್ಮಗಳನ್ನೂ, ಎಲ್ಲ ಸಂಪ್ರದಾಯಗಳನ್ನೂ ನೀವು ಇಂದು ತಿರಸ್ಕರಿಸಿದ್ದೀರಿ.
ಹೆಂಡತಿಯಾಗಲೀ, ಗಂಡನಾಗಲೀ ಪರಸ್ಪರ ಅಧೀನರೂ ಅಲ್ಲ ; ಆಜ್ಞಾನುವರ್ತಿಯೂ ಅಲ್ಲ, ಹೆಂಡತಿಯೂ ಗಂಡನಷ್ಟೇ ಸ್ವತಂತ್ರಳೂ ಸಮಾನತೆಯುಳ್ಳವಳೂ ಆಗಿರುತ್ತಾಳೆ.
ಗಂಡ–ಹೆಂಡಿರನ್ನು ಒಟ್ಟಿಗೇ ಬದುಕುವಂತೆ ಮಾಡುವ ಸಾಧನ ಪ್ರೀತಿಯೊಂದೇ. ಒಬ್ಬರನ್ನೊಬ್ಬರು ಪ್ರೀತಿಸದವರು ತಾಳಿ ಕಟ್ಟಿಕೊಂಡರೂ ವ್ಯರ್ಥ, ಅಗ್ನಿಯನ್ನು ಸುತ್ತಿದರೂ ವ್ಯರ್ಥ. ಯಾವ ಯಾವ ಶಾಸ್ತ್ರಾಚಾರದ ಪ್ರಕಾರ ಮದುವೆಯಾದರೂ ವ್ಯರ್ಥ.
ದೇವರ ಬಗ್ಗೆ ಎಂದೂ ಸುಳ್ಳು ಹೇಳಕೂಡದು. ನಿಮ್ಮ ಅನುಭವ, ನಿಮಗೆ ದೇವರು ಇಲ್ಲವೆಂದು ತಿಳಿಸಿದರೆ ದೇವರು ಇಲ್ಲವೆಂದು ಹೇಳಿ. ನಿಮ್ಮ ಅನುಭವ, ನಿಮಗೆ ದೇವರು ಇದ್ದಾನೆಂದು ತಿಳಿಸಿದರೆ ದೇವರು ಇದ್ದಾನೆಂದು ಹೇಳಿ.
ನಿಮ್ಮ ಅನುಭವ, ದೇವರು ಇದ್ದಾನೆಯೋ ಇಲ್ಲವೋ ತಿಳಿಯದೆಂದು ತಿಳಿಸಿದರೆ, ದೇವರು ಇದ್ದಾನೆಯೋ ಇಲ್ಲವೋ ತಿಳಿಯದೆಂದು ಹೇಳಿ.
ನಮ್ಮ ಅನುಭವವನ್ನು ಸುಳ್ಳು ಹೇಳದೆ ಒಪ್ಪಿಕೊಳ್ಳುವುದು, ನಿರ್ಭೀತಿಯಿಂದ ವಾಸ್ತವ ಸ್ಥಿತಿಯನ್ನು ನೋಡುವುದು, ಸತ್ಯಾನ್ವೇಷಣೆಯ ಮೊದಲನೆಯ ಹಂತ, ಜ್ಞಾನ ಯೋಗದ ಮೊದಲ ಪಾಠ.
ಪರವಂಚನೆ ಮತ್ತು ಆತ್ಮವಂಚನೆ ಮಾಡಿಕೊಳ್ಳುವವನಿಗೆ ತಮಸ್ಸಿನಿಂದಲೂ. ಅಜ್ಞಾನದಿಂದಲೂ ವಿಮುಕ್ತಿಯೇ ಇಲ್ಲ.
ದೇವರ ಹೆಸರಿನಲ್ಲಿ ಸುಳ್ಳು ಹೇಳುವ ಮಠಾಧಿಪತಿಗಳನ್ನು ಆಚಾರ್ಯರನ್ನೂ, ಜಗದ್ಗುರುಗಳನ್ನೂ ತಿರಸ್ಕರಿಸಿರಿ.
ದೇವರ ಹೆಸರಿನಲ್ಲಿ ಧನಾರ್ಜನೆ ಮಾಡುವ ತೀರ್ಥಕ್ಷೇತ್ರಗಳನ್ನೂ, ದೇವಸ್ಥಾನಗಳನ್ನೂ ತಿರಸ್ಕರಿಸಿರಿ. ದೇವರ ಹೆಸರಿನಲ್ಲಿ ದರೋಡೆ ಮಾಡುವ ಯಾತ್ರಾಸ್ಥಳಗಳನ್ನು ತಿರಸ್ಕರಿಸಿರಿ.
ವರದಕ್ಷಿಣೆ ಅಥವಾ ವಧುದಕ್ಷಿಣೆ ವ್ಯವಹಾರಗಳಿಗೆ ಒಳಗಾಗದೆ, ನೀವು ನಿಮ್ಮ ಸ್ವಂತ ಪ್ರಯತ್ನದಿಂದ ನಿಮ್ಮ ತಂದೆ ತಾಯಿಗಳಿಗೆ ಯಾವ ರೀತಿಯ ಆರ್ಥಿಕ ಹೊರೆಯಾಗದಂತೆ ವಿವಾಹ ಮಾಡಿಕೊಳ್ಳುತ್ತಿದ್ದೀರಿ. ಎಲ್ಲ ಮತಧರ್ಮ, ಕಂದಾಚಾರ, ಅಜ್ಞಾನಗಳಿಂದ ವಿಮುಕ್ತರಾಗಿರುವ ವಧೂವರರೇ, ಮಾನವ ಕೋಟಿಯನ್ನು ನಿಮ್ಮಂತೆಯೇ ವಿಮುಕ್ತರನ್ನಾಗಿ ಮಾಡುವ ಪವಿತ್ರ ಕರ್ತವ್ಯವನ್ನು ನೀವೂ ಮಾಡಿರಿ. ಇನ್ನು ನೀವು ಯಾವುದೇ ಧರ್ಮಕ್ಕೂ ಸೇರುವ ಅಗತ್ಯವಿಲ್ಲ. ಯಾವುದೇ ಮತಕ್ಕೂ ಸೇರುವ ಅಗತ್ಯವಿಲ್ಲ. ಯಾವುದೇ ಶಾಸ್ತ್ರಾಚಾರವನ್ನೂ ಅನುಸರಿಸಬೇಕಾದ ಅಗತ್ಯವಿಲ್ಲ. ಮೇಲೆ ಬೋಧಿಸಿರುವ ಪ್ರತಿಜ್ಞಾವಿಧಿಗಳೇ ನಿಮ್ಮ ಜೀವನದ ದಾರಿದೀಪವಾಗಲಿ. ಮೌಢ್ಯ, ಅಜ್ಞಾನ, ಅಂಧಕಾರಗಳ ವಿರುದ್ಧ ಭಾರತೀಯರಾದ ನಾವೆಲ್ಲ ಹೂಡಿರುವ ಈ ಮಹಾ ಹೋರಾಟದಲ್ಲಿ ನೀವೂ ಭಾಗಿಗಳಾಗಬೇಕೆಂದು ನಾವು ವಿನಂತಿಸಿಕೊಳ್ಳುತ್ತೇವೆ. ನೀವು ಇಲ್ಲಿ ಈ ದಿನದಿಂದ ದಂಪತಿಗಳೆಂದು ನಾವು ಘೋಷಿಸುತ್ತೇವೆ.

– ವಿ.ಚಂದ್ರಶೇಖರ ನಂಗಲಿ:

# ಮಹಿಳೆಗೆ ಮಹಿಳೆ ಸ್ಫೂರ್ತಿ: ತಹಸೀಲ್ದಾರ್ ಮಮತ

ಸಮಾಜದಲ್ಲಿ ಪ್ರತಿಯೊಂದು ಹೆಣ್ಣಿಗೂ ತಾಳ್ಮೆ ಸಹನೆ ಧೈರ್ಯಮತ್ತು ಮನೋಸ್ಥೈರ್ಯದಿಂದ ಕುಟುಂಬ ಸಮಾಜ ದೇಶವನ್ನ ಕಟ್ಟುವಂತಹ ಮಹತ್ತರ ಜವಾಬ್ದಾರಿ ಹೆಣ್ಣಿನಲ್ಲಿದೆ. ಪಟ್ಟಣದ ಶ್ರೀ ಬನಶಂಕರಿ ಪ್ರಾರ್ಥನಾ ಮಂದಿರದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ ಸಿ ಟ್ರಸ್ಟ್ ಚಿಕ್ಕನಾಯಕನಹಳ್ಳಿ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿಯಲ್ಲಿ ಸ್ವ ಉದ್ಯೋಗ ಸಂಸ್ಕೃತಿಕ ಕಾರ್ಯಕ್ರಮ ರಂಗೋಲಿ ಸ್ಪರ್ಧೆ ಪುಷ್ಪಗುಚ್ಛ ತಯಾರಿಕೆ ಸ್ಪರ್ಧೆ ಏರ್ಪಡಿಸಲಾಗಿತ್ತು. ಈ ಸಂದರ್ಭದಲ್ಲಿ ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿ ಮಾತನಾಡಿದ ತಹಶೀಲ್ದಾರ್ ಮಮತಾ ಎಂ ರವರು ಮಹಿಳೆಗೆ ಮಹಿಳೆ ಸ್ಫೂರ್ತಿ ಏಕೆಂದರೆ ಸಮಾಜದಲ್ಲಿ ಪ್ರತಿಯೊಂದು ಹೆಣ್ಣಿಗೂ ತಾಳ್ಮೆ ಸಹನೆ ಧೈರ್ಯ ಮನೋಸ್ಥೈರ್ಯದಿಂದ ಕುಟುಂಬ ಸಮಾಜ ದೇಶವನ್ನ ಕಟ್ಟುವಂತಹ ಮಹತ್ತರ ಜವಾಬ್ದಾರಿ ಹೆಣ್ಣಿನಲ್ಲಿದೆ, ಪ್ರತಿಯೊಬ್ಬ ಮಹಿಳೆಯು ತಮ್ಮಗೆ ಸಿಕ್ಕ



ಅವಕಾಶಗಳಲ್ಲಿ ಗುರುತಿಸಿಕೊಳ್ಳುವ ಮೂಲಕ ಪ್ರತಿಯೊಂದು ಕ್ಷೇತ್ರದಲ್ಲಿ ಸಾಧನೆ ಮೂಲಕ ತಮ್ಮ ಶಕ್ತಿಯನ್ನು ಬಿಂಬಿಸಿಕೊಳ್ಳಿ.

**ಮಹಿಳೆಯರಿಗೆ ಕಿವಿಮಾತು:——**

ಸಮಾಜದಲ್ಲಿ ಹೆಣ್ಣು ಮತ್ತು ಗಂಡು ಎಂಬ ಭೇದ ಭಾವವಿಲ್ಲದೆ ಸಮಾನತೆ ಭಾವನೆಯಿಂದ ನೋಡುವ ಮನಸ್ಥಿತಿಯನ್ನು ನಮ್ಮ ಮನೆಯ ಗಂಡು ಮಕ್ಕಳಿಗೂ ಸಿಗುವಂತ ಅವಕಾಶ ಮತ್ತೆ ಗೌರವಗಳನ್ನು ಸ್ಥಾನಮಾನಗಳನ್ನು ಹೆಣ್ಣು ಮಕ್ಕಳಿಗೂ ಕಲ್ಪಿಸಬೇಕು ಎಂದು ತಹಸೀಲ್ದಾರ್. ಮಮತ. ಎಂ. ತಿಳಿಸಿದರು.

ಎಸ್.ಕೆ.ಡಿ. ಆರ್. ಡಿ. ಪಿ.ಜಿಲ್ಲಾ ನಿರ್ದೇಶಕರು ಪ್ರವೀಣ್ ಕುಮಾರ್ ಮಾತನಾಡಿ ಸಮಾಜದಲ್ಲಿ ಮಹಿಳೆಯರು ಪಾತ್ರ ದೊಡ್ಡದು, ಮಹಿಳೆಯರು ಸ್ವಾವಲಂಬಿ ಜೀವನವನ್ನು ಕಟ್ಟಿಕೊಂಡಾಗ ಮಾತ್ರ ಕುಟುಂಬ ಸಮಾಜ ಬದಲಾವಣೆ ಕಾಣುತ್ತದೆ. ಮಹಿಳಾ ಆರ್ಥಿಕ ಸ್ವಾವಲಂಬನೆ ಮೊದಲ ಆದ್ಯತೆ.ಬಾಲ್ಯವಿವಾಹ, ಶಿಕ್ಷಣ ಬೇಟಿಪಡವೋಸ್ಲೋಗನ್ ಹಾಗಿಉಳಿಯದೆ ಕಾರ್ಯಗತ ಗೊಳಿಸಬೇಕಿದೆ. ಎಂದರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಕಾಚಪುರ ರಂಗಪ್ಪ ಮಾತನಾಡುತ್ತ ಮಹಿಳೆಯರು ಇಂದಿನ ಆಧುನಿಕ ಯುಗ ಬದಲಾದಂತೆ ತಾಂತ್ರಿಕ ಯುಗಕ್ಕೆ ಪಾಶ್ಚಿಮತ್ಯಕ್ಕೆ ಮರುಳಾಗಿ ತಮ್ಮ ಮಕ್ಕಳ ಭವಿಷ್ಯವನ್ನು ಹಾಳು ಮಾಡುತ್ತಿದ್ದೇವೆ. ಮಕ್ಕಳಿಗೆ ಅರ್ಥೈಸುವಲ್ಲಿ ಮನೆಯ ತಂದೆ ತಾಯಿ ಎಡವುತ್ತಿರುವುದರಿಂದಲೇ ತಮ್ಮ ಮಕ್ಕಳು ದುಶ್ಚಟಗಳಿಗೆ ಬಲಿಯಾಗುತ್ತಿರುವುದನ್ನ ನೋಡುತ್ತಿದ್ದೇವೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಲಕ್ಷ್ಮಿ ಪಾಂಡುರಂಗಯ್ಯ ಮಾತನಾಡಿ ಶ್ರೀ ಕ್ಷೇತ್ರ ಧರ್ಮಸ್ಥಳ ಯೋಜನಯಲ್ಲಿ ಮಹಿಳೆಯರಿಗೆ ಸ್ವಾವಲಂಬಿಜೀವನ ಕಲ್ಪಿಸಿ ಕೊಡುವಲ್ಲಿ ಅನೇಕ ರೀತಿಯ ಯೋಜನೆಗಳನ್ನು ಕಲ್ಪಿಸಿದ್ದು ಅದರ ಮೂಲಕ ಮಹಿಳೆಯರು ತಮ್ಮ ಕುಟುಂಬ ಮತ್ತೆ ಸಮಾಜದಲ್ಲಿ ಗುರುತಿಸಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು. ಈ ವೇಳೆ ಮಹಿಳಾ ಸಾಧಕೀಯರನ್ನು ಗುರುತಿಸಿಗೌರವಿಸಲಾಯಿತು,ವೇದಿಕೆಯಲ್ಲಿ ಸಾಂಸ್ಕೃತಿಕ ಮನರಂಜನೆ, ಗುಡಿ ಕೈಗಾರಿಕೆ ಉತ್ಪನ್ನಗಳು ಆಕರ್ಷಿತಗೊಂಡವು.

ಈ ಸಂದರ್ಭದಲ್ಲಿ ಚಿಕ್ಕನಾಯಕನಹಳ್ಳಿ ಯೋಜನಾ ನಿರ್ದೇಶಕರಾದ ಪ್ರೇಮಾನಂದ್ ಎಲ್ ಬಿ ಸೇರಿದಂತೆ ಸಂಘದ ಮಹಿಳಾ ಪ್ರತಿನಿಧಿಗಳು ಮೇಲ್ವಿಚಾರಕರು ಭಾಗವಹಿಸಿದ್ದರು.

# 58 ಕೋಟಿ ರೂ. ಮೌಲ್ಯದ ಡ್ರಗ್ಸ್ ಎಂಬುದು ಸತ್ಯಕ್ಕೆ ದೂರ



ಹೊಸ ವರ್ಷ ಸಮೀಪಿಸುತ್ತಿರುವುದರಿಂದ ಡ್ರಗ್ಸ್ ದಂಧೆಯ ವಿರುದ್ಧ ಅಕ್ಟೋಬರ್, ನವೆಂಬರ್ ತಿಂಗಳಿಂದ ಪೊಲೀಸರು ರಾಜ್ಯದಾದ್ಯಂತ ಹೆಚ್ಚಿನ ಕಾರ್ಯಾಚರಣೆಗಳನ್ನು ಕೈಗೊಂಡಿದ್ದಾರೆ ಎಂದು ಗೃಹ ಸಚಿವ ಜಿ.ಪರಮೇಶ್ವರ ಅವರು ತಿಳಿಸಿದರು ನಿನ್ನೆ ದಿನ ಮಹಾರಾಷ್ಟ್ರ ಪೊಲೀಸರು ಮುಂಬೈನಲ್ಲಿ ಸಿಕ್ಕ ಆರೋಪಿಯ ಮಾಹಿತಿ ಆಧರಿಸಿ ಬೆಂಗಳೂರಿನಲ್ಲಿ ಆರೋಪಿಯೊಬ್ಬನನ್ನು ಹಿಡಿದಿದ್ದಾರೆ. ಮುಂಬೈ ಪೊಲೀಸರು ಮತ್ತು ಬೆಂಗಳೂರು ನಗರ ಪೊಲೀಸರು ಜಂಟಿಯಾಗಿ ಕಾರ್ಯಾಚರಣೆ ನಡೆಸಿ ಆರೋಪಿಯನ್ನು ಬಂಧಿಸಲಾಗಿದೆ. ಆರೋಪಿಯು ಡ್ರಗ್ಸ್ ತಯಾರಿಸಲು ಬೇಕಾದ ಮೆಫೆಡ್ರಿನ್ ಎಂಬ ಕೆಮಿಕಲ್ ಸಂಗ್ರಹಿಸಿಟ್ಟುಕೊಂಡಿದ್ದ.

ಮುಂಬೈನಲ್ಲಿ ಸಿಕ್ಕಿದ್ದ ಆರೋಪಿಯು ನೀಡಿದ ಸುಳಿವಿನ ಮೇರೆಗೆ ಬೆಂಗಳೂರು ನಗರ ಪೊಲೀಸ್, ಮುಂಬೈ ಪೊಲೀಸ್, ಎನ್‌ಸಿಬಿ, ಸೋಕೋ ಟೀಮ್‌ನವರು ಜಂಟಿಯಾಗಿ ಕಾರ್ಯಾಚರಣೆ ನಡೆಸಿದ್ದಾರೆ. ಈ ಪ್ರಕರಣದಲ್ಲಿ ಬೆಂಗಳೂರು ನಗರ ಪೊಲೀಸರು ಏನು ಕ್ರಮ ಕೈಗೊಂಡಿಲ್ಲ ಎಂಬ ಮಾತುಗಳು ಸರಿಯಲ್ಲ ಎಂದರು.

58 ಕೋಟಿ ರೂ. ಮೌಲ್ಯದ ಡ್ರಗ್ಸ್ ಹಿಡಿದಿದ್ದೇವೆ ಎಂದು ಹೇಳಿಕೊಂಡಿದ್ದಾರೆ. ಇದು ಸತ್ಯಕ್ಕೆ ದೂರವಾದ ಮಾಹಿತಿ. ಪತ್ತೆಯಾಗಿರುವ ಡ್ರಗ್ಸ್ ಕೆಮಿಕಲ್ ಮೌಲ್ಯ 1 ಕೆಜಿಗೆ 30 ಲಕ್ಷ ರೂ. ಬೆಲೆಬಾಳುತ್ತದೆ. ಒಟ್ಟು 4 ಕೆಜಿಗೆ 1.20 ಕೋಟಿ ರೂ. ಮೌಲ್ಯವಾಗುತ್ತದೆ ಎಂದ ಅವರು, ಮೈಸೂರು ಘಟನೆಯ ಬಳಿಕ ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದು ಸೂಚನೆ ನೀಡಲಾಗಿದೆ. ಡ್ರಗ್ಸ್ ದಂಧೆಯ ವಿರುದ್ಧ ಅಕ್ಟೋಬರ್‌ನಿಂದ ಹೆಚ್ಚಿನ ರೀತಿಯಲ್ಲಿ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ನಿನ್ನೆಯ ಘಟನೆಯ ಬಗ್ಗೆ ಸಮರ್ಥಿಸಿಕೊಳ್ಳಲು ಹೋಗುವುದಿಲ್ಲ. ಅನೇಕ ಸಂದರ್ಭಗಳಲ್ಲಿ ನಮ್ಮ ಪೊಲೀಸರು, ಇಲ್ಲಿ ಸಿಕ್ಕ ಆರೋಪಿಗಳು ನೀಡಿರುವ ಮಾಹಿತಿ ಆಧರಿಸಿ ಬೇರೆ ರಾಜ್ಯಗಳಲ್ಲಿ ಕಾರ್ಯಾಚರಣೆ ಕೈಗೊಂಡಿರುತ್ತೇವೆ. ಈಗಾಗಲೇ ಬೇರೆಬೇರೆ ಪ್ರಕರಣಗಳಲ್ಲಿ ನಾಲ್ಕು ಪೊಲೀಸರ ತಂಡಗಳು ಕಾಯುತ್ತಿವೆ. ಆಗ ಅಲ್ಲಿನ ಪೊಲೀಸರ ವೈಫಲ್ಯ ಎಂದು ಹೇಳಲಾಗುತ್ತಿದಯೇ? ಮೂರು ಕಡೆಗಳಲ್ಲಿ ಫ್ಯಾಕ್ಟರಿ ಇತ್ತು ಎಂಬುದು ಸುಳ್ಳು. ಕಾರ್ಯಾಚರಣೆ ವೇಳೆ ನಮ್ಮ ಡಿಸಿಪಿಯವರು ಮುಂಬೈ ಪೊಲೀಸರೊಂದಿಗೆ ಇದ್ದರು. ಡ್ರಗ್ಸ್ ದಂಧೆಯ ವಿರುದ್ಧ ರಾಷ್ಟ್ರೀಯ ಮಟ್ಟದಲ್ಲಿ ಸಂಘಟಿತವಾಗಿ ಹೋರಾಟ ನಡೆಸಲಾಗುತ್ತಿದೆ ಎಂದು ಹೇಳಿದರು.

ಬೆಂಗಳೂರಿನಲ್ಲಿ ಮುಂದೆ ಇಂತಹ ಘಟನೆ ಆಗಬಾರದು. ಡಿಸಿಪಿ ಆಗಲಿ, ಎಸಿಪಿ ಅಥವಾ ಸ್ಥಳೀಯ ಅಧಿಕಾರಿಗಳು ಯಾರೇ ಇರಲಿ ಅವರ ವಿರುದ್ಧ ಕ್ರಮ ತೆಗೆದುಕೊಳ್ಳುತ್ತೇವೆ. ಅಮಾನತು ಅಷ್ಟೇ ಅಲ್ಲದೇ ಬೇರೆ ರೀತಿಯ ಕ್ರಮ ತೆಗೆದುಕೊಳ್ಳುತ್ತಿದ್ದೇವೆ ಎಂದರು.

ರಾಜ್ಯ ಪೊಲೀಸ್ ಮಹಾನಿರ್ದೇಶಕರಾದ ಡಾ. ಎಂ.ಎ.ಸಲೀಂ ಅವರು, ಬೆಂಗಳೂರು ನಗರ ಪೊಲೀಸ್ ಆಯುಕ್ತರಾದ ಸೀಮಂತ್ ಕುಮಾರ್ ಸಿಂಗ್ ರವರು, ಜಂಟಿ ಪೊಲೀಸ್ ಆಯುಕ್ತರುಗಳಾದ ರಮೇಶ್ ಬಾನೋಥ್, ವಂಶಿಕೃಷ್ಣ, ಸಿಸಿಬಿ ಜಂಟಿ ಪೊಲೀಸ್ ಆಯುಕ್ತರಾದ ಅಜಯ್ ಹಿಲೋರಿ, ಸಂಚಾರ ವಿಭಾಗದ ಜಂಟಿ ಪೊಲೀಸ್ ಆಯುಕ್ತರಾದ ಕಾರ್ತಿಕ್ ರೆಡ್ಡಿ ಹಾಗೂ ಎಲ್ಲ ವಿಭಾಗಗಳ ಡಿಸಿಪಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಜ.9 ಮತ್ತು 10 ರಂದು ತಾಲ್ಲೂಕು ಮಟ್ಟದ ಹಾಲು ಕರೆಯುವ ಸ್ಪರ್ಧೆ ಹಳ್ಳಿಕಾರ್ ತಳಿಗಳ ಪ್ರದರ್ಶನ

ಶಿರಾ : ರೈತರು ಹೈನುಗಾರಿಗೆಯತ್ತ ಹೆಚ್ಚು ಆಕರ್ಷಣೆ ಹೊಂದಿ ಕ್ರೀಯಾಶೀಲತೆಯಿಂದ ಉದ್ಯಮದಲ್ಲಿ ತೊಡಗಿಸಿಕೊಂಡು ಆರ್ಥಿಕ ಶಕ್ತಿ ವೃದ್ಧಿಯೊಂದಿಗೆ ಜೀವನ ಮಟ್ಟ ಸುಧಾರಿಸುವ ದೃಷ್ಟಿಯಿಂದ

ತಾಲ್ಲೂಕಿನ ರೈತರಲ್ಲಿ ಸ್ಪರ್ಧಾತ್ಮಕ ಭಾವನೆ ಹಾಗೂ ಗುಣಮಟ್ಟದ ಹಾಲು ಉತ್ಪಾದನೆ ಮಾಡುವ ನಿಟ್ಟಿನಲ್ಲಿ ತಾಲ್ಲೂಕು ಮಟ್ಟದ ಹಾಲು ಕರೆಯುವ ಸ್ಪರ್ಧೆ ಏರ್ಪಡಿಸಿ ಹೈನುಗಾರಿಕೆಯನ್ನು ಉತ್ತೇಜುಸುತ್ತಿದ್ದೇವೆ ಎಂದು ತುಮಕೂರು ಹಾಲು ಒಕ್ಕೂಟದ ನಿರ್ದೇಶಕ ಎಸ್. ಆರ್. ಗೌಡ ಹೇಳಿದರು.

ಶಿರಾ ತಾಲ್ಲೂಕಿನ ಪಟ್ಟನಾಯಕನಹಳ್ಳಿ ಶ್ರೀ ಗುರುಗುಂಡ ಬ್ರಹ್ಮೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ ಹಾಗೂ 23 ನೇ ಕೃಷಿ ಮತ್ತು ಕೈಗಾರಿಕಾ ವಸ್ತು ಪ್ರದರ್ಶನದ ಅಂಗವಾಗಿ ಪಶುಪಾಲನೆ ಮತ್ತು ಪಶು ವೈದ್ಯಕೀಯ ಇಲಾಖೆ ಹಾಗೂ ತುಮಕೂರು ಹಾಲು ಒಕ್ಕೂಟದ ಸಹಯೋಗದೊಂದಿಗೆ ತಾಲ್ಲೂಕು ಮಟ್ಟದ ಹಾಲು ಕರೆಯುವ ಸ್ಪರ್ಧೆ ಹಾಗೂ ರಾಜ್ಯ ಮಟ್ಟದ ಹಳ್ಳಿಕಾರ್ ತಳಿಗಳ ಪ್ರದರ್ಶನ ಹಾಗೂ ಜಿಲ್ಲಾ ಮಟ್ಟದ ಶ್ವಾನಗಳ ಪ್ರದರ್ಶನ ಜ.9 ಮತ್ತು 10 ರಂದು ನಡೆಯಲಿದೆ ಎಂದು ನಗರದ



ಪಶು ಇಲಾಖೆಯಲ್ಲಿ ಮಾಹಿತಿ ನೀಡಿ ಮಾತನಾಡಿದರು.

ಹಾಲು ಕರೆಯುವ ಸ್ಪರ್ಧೆಯಲ್ಲಿ ವಿಜೇತರಿಗೆ ಪ್ರಥಮ ಬಹುಮಾನ 50 ಸಾವಿರವನ್ನು ತುಮಕೂರು ಹಾಲು ಒಕ್ಕೂಟದಿಂದ ನೀಡಲಾಗುವುದು, ದ್ವಿತೀಯ ಬಹುಮಾನ 30 ಸಾವಿರ, ತೃತೀಯ ಬಹುಮಾನ 20 ಸಾವಿರ ನಗದು ಬಹುಮಾನ ಜೊತೆ ಆಕರ್ಷಕ ಪಾರಿತೋಷಕ

ಹಾಗೂ ಭಾಗವಹಿಸಿದ ಎಲ್ಲಾ ಸ್ಪರ್ಧಾಳುಗಳಿಗೆ ತಲಾ 2 ಸಾವಿರ ನಗದು ಜೊತೆಗೆ ಸಮಾಧಾನಕರ ಬಹುಮಾನ ಪಶು ಇಲಾಖೆಯಿಂದ ವಿತರಣೆ ಮಾಡಲಾಗುವುದು ಎಂದರು.

ಪಶುಪಾಲನ ಮತ್ತು ಪಶು ವೈದ್ಯಕೀಯ ಸೇವೆ ಇಲಾಖೆ ಉಪ ನಿರ್ದೇಶಕ ಡಾ ಹೆಚ್. ಎಂ. ಶಿವಪ್ರಸಾದ್ ಮಾತನಾಡಿ:

ಹಾಲು ಕರೆಯುವ ಸ್ಪರ್ಧೆಯಲ್ಲಿ ಶಿರಾ ತಾಲೂಕಿನ ರೈತರಿಗೆ ಮಾತ್ರ ಅವಕಾಶವಿದ್ದು, ಜ.9ರ ಮಧ್ಯಾಹ್ನ 12 ರಿಂದ ನೊಂದಣಿ ಪ್ರಕ್ರಿಯೆ ಪ್ರಾರಂಭವಾಗಲಿದ್ದು, ಸಂಜೆ 6 ಗಂಟೆಯ ನಂತರ ಸ್ಪರ್ಧೆಯಲ್ಲಿ ಪಾಲ್ಗೊಳ್ಳುವ ಹಸುಗಳಿಗೆ ತಂಗಲು ಸುಸಜ್ಜಿತವಾದ ವ್ಯವಸ್ಥೆ ಕಲ್ಪಿಸಲಾಗಿದ್ದು, ಜ.10ರ ಬೆಳಗ್ಗೆ ಕರೆಯುವ ಹಾಲಿನ ಆಧಾರದ ಮೇಲೆ ಬಹುಮಾನ ಘೋಷಣೆ ಮಾಡಲಾಗುವುದು ಎಂದರು.

ಪಶು ಪಾಲನ ಮತ್ತು ಪಶು ವೈದ್ಯಕೀಯ ಇಲಾಖೆ ಸಹಾಯಕ ನಿರ್ದೇಶಕರು ಡಾ. ಜೆ .ಸಂಪತ್ ಕುಮಾರ್ ಮಾತನಾಡಿ: ಶ್ರೀ ನಂಜಾವಧೂತ ಸ್ವಾಮಿಜಿಗಳ ಒತ್ತಾಸೆಯಂತೆ ರಾಜ್ಯಮಟ್ಟದ ಹಳ್ಳಿಕಾರ್ ತಳಿ ಪ್ರದರ್ಶನ ಹಾಗೂ

ಜಿಲ್ಲಾ ಮಟ್ಟದ ಶ್ವಾನ ಪ್ರದರ್ಶನ ಏರ್ಪಡಿಸಲಾಗಿದ್ದು, ಕೃಷಿ ಮಾರಾಟ ಇಲಾಖೆ ವತಿಯಿಂದ ಉತ್ತಮ ರಾಸುಗಳಿಗೆ ಪ್ರಥಮ ಬಹುಮಾನ 10 ಸಾವಿರ, ದ್ವಿತೀಯ 7 ಸಾವಿರ ತೃತೀಯ 5 ಸಾವಿರ ಬಹುಮಾನ ನೀಡಲಾಗುವುದು ಜೊತೆಗೆ ಜ. 10ರಂದು ನಡೆಯುವ ಜಿಲ್ಲಾ ಮಟ್ಟದ ಸ್ವಾನ ಪ್ರದರ್ಶನದಲ್ಲಿ ಉತ್ತಮ ಶ್ವಾನಗಳಿಗೆ ಪ್ರಥಮ ಬಹುಮಾನ 25 ಸಾವಿರ, ದ್ವಿತೀಯ ಬಹುಮಾನ 15 ಸಾವಿರ ಹಾಗೂ ತೃತೀಯ ಬಹುಮಾನ 10 ಸಾವಿರ ನೀಡಲಾಗುವುದು ಎಂದರು.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ ಡಾ. ನಾಗೇಶ್ :9916142011.

ಮುಖ್ಯ ಪಶು ವೈದ್ಯಧಿಕಾರಿ ಡಾ. ಎಚ್. ನಾಗೇಶ್ ಸೇರಿದಂತೆ ತಾಲೂಕಿನ ಹಲವಾರು ಪಶು ವೈದ್ಯರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

# 50ನೇ ವರ್ಷದ ಶಾಲಾ ವಾರ್ಷಿಕೋತ್ಸವ



ತುಮಕೂರು– ಇಲ್ಲಿನ ವಿದ್ಯಾನಗರದಲ್ಲಿರುವ ವಿವೇಕಾನಂದ ಶಾಲೆಯಲ್ಲಿ 50ನೇ ವರ್ಷದ ಶಾಲಾ ವಾರ್ಷಿಕೋತ್ಸವವನ್ನು ಸಂಭ್ರಮ ಸಡಗರದಿಂದ ಆಚರಿಸಲಾಯಿತು.

ನಗರದ ಡಾ. ಗುಬ್ಬಿವೀರಣ್ಣ ರಂಗಮಂದಿರದಲ್ಲಿ ವಿವೇಕಾನಂದ ಶಾಲೆಯು ವಿವೇಕ ದೀಪ ಎಂಬ ಹೆಸರಿನಡಿ ಕಾರ್ಯಕ್ರಮವನ್ನು ಆಯೋಜಸಲಾಗಿತ್ತು.

ಕಿರುತೆರೆ ನಟಿ ಹಾಗೂ ಬಹುಮುಖ ಪ್ರತಿಭೆ ಚಂದನ ಅನಂತಕೃಷ್ಣರವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಈಗಿನ ಕಾಲದಲ್ಲಿ ವಿದ್ಯಾಭ್ಯಾಸ ಅತಿ ಮುಖ್ಯವಾದದ್ದು. ಸಂಗೀತ ಹಾಗೂ ನೃತ್ಯ ತರಗತಿಗಳಿಗೆ ಸೇರುವುದರಿಂದ ಮಾನಸಿಕ ಆರೋಗ್ಯ ಹೆಚ್ಚಾಗುತ್ತದೆ. ಓದುವುದು ಎಷ್ಟು ಮುಖ್ಯವೋ ಸಂಗೀತ, ನೃತ್ಯ ಕಲಿಕೆಯೂ ಅಷ್ಟೇ ಮುಖ್ಯ ಎಂದರು.

ಎಸ್‌ಎಸ್‌ಎಲ್‌ಸಿಯು ನಿಮ್ಮ ಭವಿಷ್ಯ ರೂಪಿಸುವ ಘಟ್ಟವಾಗಿದ್ದು, ಶಾಲೆಯ ದಿನಗಳನ್ನು ಮುಖ್ಯವಾಗಿಸಿಕೊಳ್ಳಬೇಕು. ಪೋಷಕರು ಮಕ್ಕಳಿಗೆ ಒತ್ತಡ ಹಾಕದೆ ಮಕ್ಕಳು ಯಾವ ವಿಷಯದಲ್ಲಿ ಆಸಕ್ತಿ ಹೊಂದಿರುತ್ತಾರೋ ಆ ವಿಷಯದ ಬಗ್ಗೆ ಅಭ್ಯಾಸ ಮಾಡಲು ಸಹಕರಿಸಬೇಕು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಅವರನ್ನು ಸನ್ಮಾನಿಸಲಾಯಿತು.

ವಿವೇಕಾನಂದ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಶಿವಪ್ರಕಾಶ್ ಮಾತನಾಡಿ, ತಮ್ಮ ಶಾಲೆಯು ಅಭಿವೃದ್ಧಿ ಹೊಂದುವುದಕ್ಕೆ ಪೋಷಕರು, ಮಕ್ಕಳು ಹಾಗೂ ಶಿಕ್ಷಕರ ಪ್ರೋತ್ಸಾಹವೇ ಪ್ರಮುಖ ಕಾರಣ ಎಂದು ಹೇಳಿದರು.

ಶಾಲೆಯ ಮುಖ್ಯಶಿಕ್ಷಕಿ ಕುಸುಮ ಮಾತನಾಡಿ, ವಿವೇಕಾನಂದ ಶಾಲೆಗೆ ಶಿಕ್ಷಕಿಯಾಗಿ ಸೇರಿದ್ದು, ಈ ಶಾಲೆಯಲ್ಲಿ ಈಗ ಮುಖ್ಯ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿದ್ದೇನೆ. ತಮ್ಮ ಸೇವೆಯು ಈಗಾಗಲೇ 25 ವರ್ಷ ಆಗಿದೆ ಎಂದರು.

# ಸಾಂಸ್ಕೃತಿಕ ಸ್ಪರ್ಧೆಗಳೊಂದಿಗೆ ರಾಜ್ಯೋತ್ಸವ ಆಚರಣೆ

ತುಮಕೂರು: ವಿವಿಧ ಸಾಂಸ್ಕೃತಿ, ಕಲಾ ಸ್ಪರ್ಧೆಗಳನ್ನು ಆಯೋಜಿಸಿ ಕನ್ನಡ ಸಂಸ್ಕೃತಿ ಮತ್ತು ರಕ್ಷಣಾ ವೇದಿಕೆಯಿಂದ ಭಾನುವಾರ ನಗರದಲ್ಲಿ ಸಂಭ್ರಮದ ಕನ್ನಡ ರಾಜ್ಯೋತ್ಸವ ಆಚರಿಸಲಾಯಿತು.

ಬಿ.ಹೆಚ್.ರಸ್ತೆಯ ಸರ್ಕಾರಿ ಪಾಲಿಟೆಕ್ನಿಕ್ ಎದುರು ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಶಾಸಕ ಜಿ.ಬಿ.ಜ್ಯೋತಿಗಣೇಶ್, ಕನ್ನಡ ನಾಡುನುಡಿಗೆ ಶ್ರಮಿಸಿದ ಗಣ್ಯರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ವೇಳೆ ಹಿರಿಯ ಪತ್ರಕರ್ತ ಜಯಣ್ಣ ಬೆಳಗೆರೆ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕನ್ನಡ ಸೇನೆ ಜಿಲ್ಲಾ ಅಧ್ಯಕ್ಷ ಡಾ.ಧನಿಯಾಕುಮಾರ್ ಮಾತನಾಡಿ, ಕನ್ನಡ ಭಾಷೆ, ನೆಲ, ಜಲ, ಸಂಸ್ಕೃತಿಯ ರಕ್ಷಣೆ ಕನ್ನಡಿಗರ ಹೊಣೆ. ಇಂದು ಕನ್ನಡ ಶಾಲೆಗಳು ಮುಚ್ಚಿಹೋಗುತ್ತಿವೆ. ಕನ್ನಡ ಕಲಿಸುವ ಶಾಲೆಗಳೇ ಇಲ್ಲವಾದರೆ ಕನ್ನಡ ಭಾಷೆಯ ಬೆಳವಣಿಗೆ ಇನ್ನಿಲ್ಲವಾಗುತ್ತದೆ ಎಂದು ಕಳವಳ ವ್ಯಕ್ತಪಡಿಸಿದ ಅವರು,




ಕನ್ನಡ ಶಾಲೆಗಳನ್ನು ಉಳಿಸಲೇಬೇಕಾಗಿದೆ ಎಂದರು. ನಾಮಫಲಕಗಳಲ್ಲಿ ಶೇಕಡ 60ರಷ್ಟು ಕನ್ನಡ ಭಾಷೆ ಕಡ್ಡಾಯ ಎಂದು ಸರ್ಕಾರದ ಸುತ್ತೋಲೆ ಇದ್ದರೂ ನಿಯಮ ಉಲ್ಲಂಘಿಸಿರುವವರ ವಿರುದ್ಧ ಯಾವುದೇ ಕ್ರಮ ತೆಗೆದುಕೊಳ್ಳದೆ ಅಧಿಕಾರಿಗಳು ನಿರ್ಲಕ್ಷವಹಿಸಿದ್ದಾರೆ ಎಂದು ಆಕ್ರೋಶವ್ಯಕ್ತಪಡಿಸಿ, ಕೈಗಾರಿಕೆಗಳಲ್ಲಿ ಕನ್ನಡಿಗರಿಗೆ ಉದ್ಯೋಗ ನೀಡಲು ಸರ್ಕಾರ ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಇದರ ಅಂಗವಾಗಿ ಶಾಲಾ ಮಕ್ಕಳಿಗೆ ಚಿತ್ರರಚನಾ ಸ್ಪರ್ಧೆ, ರಂಗೋಲಿ ಸ್ಪರ್ಧೆ, ಕನ್ನಡ ಗೀತೆಗಾಯನ, ನೃತ್ಯ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಹೆಣ್ಣುಮಕ್ಕಳಿಗೆ ಸೀರೆ ವಿತರಣೆ ಮಾಡಲಾಯಿತು.

ಕನ್ನಡ ಸಂಸ್ಕೃತಿ ಮತ್ತು ರಕ್ಷಣಾ ವೇದಿಕೆ ಅಧ್ಯಕ್ಷ ಹೊಸಕೋಟೆ ನಟರಾಜು ಸಮಾರಂಭದ ಅಧ್ಯಕ್ಷತೆವಹಿಸಿದ್ದರು. ವಿವಿಧ ಸಂಘಟನೆಗಳ ಮುಖಂಡರಾದ ಕನ್ನಡ ಬಾಬು, ಎಂ.ಗೋಪಿ, ಶಬ್ಬೀರ್ ಅಹ್ಮದ್, ರಾಮಚಂದ್ರರಾವ್, ಅರುಣ್‌ಕುಮಾರ್, ವೀರೇಶ್ ಗುಬ್ಬಿ, ಲಲಿತಾ ಮಹೇಶ್, ಕಲಾ ಶಿಕ್ಷಕ ಡೇವಿಡ್ ಮೊದಲಾದವರು ಭಾಗವಹಿಸಿದ್ದರು.

# ಹುಟ್ಟು – ಸಾವಿನ ಸತ್ಯ ಅರ್ಥ ಮಾಡಿಕೊಂಡರೆ ಮೇಲು,ಕೀಳುಎಂಬ ತಾರತಮ್ಯ ಕಡಿಮೆಯಾಗುತ್ತದೆ

ತುಮಕೂರು.ಹುಟ್ಟು ಸಾವಿನ ಸತ್ಯವನ್ನು ಮನುಷ್ಯ ಅರ್ಥ ಮಾಡಿಕೊಂಡರೆ,ಮೇಲು,ಕೀಳು, ಬಡವ, ಬಲ್ಲಿದ ಎಂಬ ತಾರತಮ್ಯ ತಾನಾಗಿಯೇ ಕಡಿಮೆಯಾಗುತ್ತದೆ.ಈ ಹುಟ್ಟು,ಸಾವನ್ನು ಸರಿಯಾಗಿ ಅರ್ಥೈಸುವ ಕೆಲಸವನ್ನು ಧರ್ಮ ಗುರುಗಳು ಮಾಡಬೇಕಾಗಿದೆ ಎಂದು ಜೆ.ಐ.ಹೆಚ್.ರಾಜ್ಯ ಕಾರ್ಯದರ್ಶಿ ಅಕ್ಬರ್ ಆಲಿ ಉಡುಪಿ ಅಭಿಪ್ರಾಯಪಟ್ಟಿದ್ದಾರೆ.

ನಗರದ ಬಾಲಭವನದಲ್ಲಿ ಜಮಾಆತೆ ಎ–ಇಸ್ಲಾಮೀ ಹಿಂದ್ ವತಿಯಿಂದ ಆಯೋಜಿಸಿದ್ದ ಸೀರತ್ ಅಭಿಯಾನದಲ್ಲಿ ನ್ಯಾಯದ ಪ್ರತಿಪಾದಕ ಪ್ರವಾದಿ ಮಹಮದ್ ಪೈಗಂಬರ್ ಎಂಬ ವಿಚಾರ ಕುರಿತು ಮಾತನಾಡಿದ ಅವರು,ಸೀರತ್ ಎಂದರೆ ಜೀವನ ವಿಧಾನ.ಪ್ರವಾದಿ ಮಹಮದ್‌ರು ಜೀವನ ವಿಧಾನದ 27 ಅಂಶಗಳ ಮೇಲೆ ಪ್ರಭಂಧ ನಡೆದಿದೆ.ಪ್ರವಾದಿಗಳನ್ನು ಪರಿಚಯಿಸುವ ಹೊಸ ವಿಧಾನವಾಗಿದೆ ಎಂದರು.

ಪ್ರವಾದಿಗಳು ಪ್ರತಿಪಾದಿಸಿದಂತೆ ಶಿಕ್ಷಣವೆಂಬದು ಹುಟ್ಟಿನಿಂದ ಗೋರಿಯವರೆಗೆ ಇರಬೇಕು.ಪದವಿ ಪಡೆಯುವುದೇ ಶಿಕ್ಷಣವಲ್ಲ. ಜೀವನದ ಪ್ರತಿ ಹಂತದಲ್ಲಿಯೂ ಕಲಿಯುವುದು ಇದೆ.ವಿದ್ಯಾವಂತನಿಗೂ,ಶಿಕ್ಷಣವಂತನಿಗೂ ಸಾಕಷ್ಟ ವೆತ್ಯಾಸವಿದೆ.ಶಿಕ್ಷಣ ನಿಮನ್ನು ಪದವಿಧರನನ್ನಾಗಿಸಿದರೆ,ವಿದ್ಯೆ ನಿಮ್ಮನ್ನು ಮನುಷ್ಯನನ್ನಾಗಿಸುತ್ತದೆ.ಹಾಗಾಗಿ ನಾವೆಲ್ಲರೂ ವಿದ್ಯಾವಂತರಾಗಿ ಬಾಳುವುದನ್ನು ಕಲಿಯೋಣ ಎಂದು ಅಕ್ಬರ್ ಆಲಿ ಉಡುಪಿ ತಿಳಿಸಿದರು.

ನಿವೃತ್ತ ಪ್ರಾಧ್ಯಾಪಕರಾದ ಸಿದ್ದಲಿಂಗಯ್ಯ ಮಾತನಾಡಿ,ಪತ್ಯ ಮತ್ತು ಪತ್ಯೇತರ ಯಾವುದೇ ಸ್ಪರ್ಧೆಗಳಲ್ಲಿ ಭಾಗವಹಿಸುವವರಿಗೆ ಯಾರು ಪುಕ್ಕಟೆಯಾಗಿ




ಪ್ರಶಸ್ತಿ ನೀಡುವುದಿಲ್ಲ. ಅಲ್ಲಿ ನಿಮ್ಮ ಪ್ರತಿಭೆಯ ಗುರುತು ಇರಬೇಕು.ಪುಕ್ಕಟೆಯಾಗಿ ಸಿಗುವ ಪ್ರಶಸ್ತಿಗೆ ಯಾವುದೇ ಬೆಲೆಯಿಲ್ಲ.ಮೊದಲು ಭಾಗವಹಿಸುವುದನ್ನು ಕಲಿಯಬೇಕು.ಸೋಲಿನ ನಂತರ ಗೆಲುವು ಇರುತ್ತದೆ. ಅದನ್ನು ಹುಡುಕುವ ಪ್ರಯತ್ನವನ್ನು ವಿದ್ಯಾರ್ಥಿಗಳು ಮಾಡಬೇಕು.ಇಂದಿನ ಸೀರತ್ ಅಭಿಯಾನದಿಂದ ನಿಮಗೆ ಕೆಲ ವಿಷಯದ ಅರಿವು ಆಗಿದೆ.ಮತ್ತಷ್ಟು ಅರಿಯುವ ಕೆಲಸ ಮಾಡಬೇಕೆಂದು ಎಂದು ಸಲಹೆ ನೀಡಿದರು.

ಸಿದ್ದಾರ್ಥ ಅಕಾಡೆಮಿ ಅಫ್ ಹೈಯರ್ ಎಜುಕೇಷನ್‌ನ ಉಪಕುಲಪತಿ ಡಾ.ನಿಂಗೇಗೌಡ ಮಾತನಾಡಿ,ಬದುಕಿಗೆ ಎಲ್ಲವೂ ಬೇಕು.ನಾವು ಹೆಚ್ಚು ಹೆಚ್ಚು ಧರ್ಮ ಗ್ರಂಥಗಳನ್ನು ಓದಿದಷ್ಟು ನಮ್ಮಗಳ ನಡುವೆ ಇರುವ ಭಿನ್ನಾಪ್ರಾಯ ಕೊನೆಗೊಳ್ಳತ್ತದೆ. ಜನಾಬ್ ಅಕ್ಬರ್ ಆಲಿ ಉಡುಪಿ ಅವರ ಮಾತು ಕೇಳಿದ ನಂತರ,ಮನುಷ್ಯ ಬದಲಾವಣೆಯತ್ತ ನಡೆಯಬೇಕಿದೆ ಎಂದೆನಿಸತ್ತದೆ. ನಾನು ಮೂವತ್ತು ವರ್ಷಗಳ ಕಾಲ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಕೆಲಸ ಮಾಡಿದ್ದೇನೆ. ಶೇ90ರಷ್ಟು ಜನರು ಕ್ಯಾನ್ಸರ್‌ನ ನಾಲ್ಕನೇ ಹಂತದಲ್ಲಿ ಚಿಕಿತ್ಸೆಗೆ ಬರುತ್ತಾರೆ. ಆರಂಭದಲ್ಲಿಯೇ ಪತ್ತೆ ಹಚ್ಚಿದರೆ ಸಂಪೂರ್ಣವಾಗಿ ಗುಣಪಡಿಸಬಹುದು ಎಂದರು.

ಜಮಾಆತೆ ಎ.ಇಸ್ಲಾಮಿ ಹಿಂದ್‌ನ ಅಬ್ದುಲ್ ಜಬ್ಬಾರ್ ಪ್ರಾಸ್ತಾವಿಕ ನುಡಿಗಳನ್ನಾಡಿ,ಕುರಾನ್, ಬೈಬಲ್, ವೇದ, ಉಪನಿಷತ್ ಎಲ್ಲಾ ಧರ್ಮ ಗ್ರಂಥಗಳನ್ನು ಎಲ್ಲಾ ಸಮುದಾಯದವರು ಓದುವಂತಾಗಬೇಕು. ಆಗ ಮಾತ್ರ ನಮ್ಮ ನಡುವೆ ಇರುವ ತಪ್ಪು ತಿಳುವಳಿಕೆ ಹೋಗಲಾಡಿಸಲು ಸಾಧ್ಯ. ಈ ನಿಟ್ಟಿನಲ್ಲಿ ಸೀರತ್ ಅಭಿಯಾನವನ್ನು ಕೈಗೊಳ್ಳಲಾಗಿದೆ. ಸಾವಿರಾರು ಮಕ್ಕಳು ಭಾಗವಹಿಸಿ, ತಮಗೆ ತೋಚಿದಂತೆ ಪ್ರವಾದಿಗಳನ್ನು ಚಿತ್ರಿಸಿದ್ದಾರೆ. ಇದಕ್ಕೆ ಸಹಕರಿಸಿದ ಎಲ್ಲರಿಗೂ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದರು.

ವೇದಿಕೆಯಲ್ಲಿ ಉದ್ಯಮಿ ತಾಜುದ್ದೀನ ಷರೀಫ್,ಅಲಿ ಪಿಯು ಕಾಲೇಜಿನ ಷೇಕ್ ಮೊಹಮದ್ ಅನ್ವರ್,ಹೆಚ್. ಎಂ.ಎಸ್ ಪಾಲಿಟೆಕ್ನಿಕ್‌ನ ಅಬ್ದುಲ್ ರಬ್,ಅಕ್ಸ್‌ಫರ್ಡ್ ಜೈನ್ ಕಾಲೇಜಿನ ಡಾ.ಮಧುಶ್ರೀ,ಎನ್.ಎಸ್. ಮತ್ತಿತರರು ಪಾಲ್ಗೊಂಡಿದ್ದರು. ಸೀರತ್ ಅಭಿಯಾನದ ಅಂಗವಾಗಿ ನಡೆದ ಪ್ರಭಂಧ ಸ್ಪರ್ಧೆಯಲ್ಲಿ ಬಹುಮಾನ ಪಡೆದ ಮಕ್ಕಳನ್ನು ಅಭಿನಂದಿಸಲಾಯಿತು.

# ವರ್ಷಾಚರಣೆಯ ಮಾದಕ ಪಾರ್ಟಿಗಳಿಗೆ ಅನುಮತಿ ಬೇಡ



ಡಿಸಿ, ಎಸ್ಪಿಗೆ ಹಿಂದೂ ಹಿತ ರಕ್ಷಣಾ ವೇದಿಕೆ ಮನವಿ

ತುಮಕೂರು: ಆಂಗ್ಲ ಹೊಸ ವರ್ಷಾಚರಣೆ ಅಂಗವಾಗಿ ಇದೇ 31ರಂದು ಜಿಲ್ಲೆಯಾದ್ಯಂತ ಅಶ್ಲೀಲ ನೃತ್ಯ, ಮಾದಕ ಪದಾರ್ಥಗಳ ಪಾನಗೋಷ್ಠಿಗಳಿಗೆ ಅನುಮತಿ ನೀಡಬಾರದು ಎಂದು ಹಿಂದೂ ಹಿತ ರಕ್ಷಣಾ ವೇದಿಕೆ ಮುಖಂಡರು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

ವೇದಿಕೆ ಅಧ್ಯಕ್ಷ ಆರ್.ಕೆ. ಮಂಜುಭಾರ್ಗವ್ ಹಾಗೂ ಇತರೆ ಮುಖಂಡರು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿ, ಜಿಲ್ಲೆಯ ದೇವರಾಯನದುರ್ಗ, ನಾಮದ ಚಿಲುಮೆ, ಗೊರವನಹಳ್ಳಿ ಬಸ್ತಿ ಬೆಟ್ಟ, ರಾಮದೇವರ ಬೆಟ್ಟ, ಸಿದ್ಧರಬೆಟ್ಟ, ಚೆನ್ನರಾಯನದುರ್ಗ, ಮಧುಗಿರಿ ಏಕಶಿಲಾ ಬೆಟ್ಟ, ಇನ್ನಿತರ ಧಾರ್ಮಿಕ ಪ್ರದೇಶ, ಶ್ರದ್ಧಾಕೇಂದ್ರ, ಪ್ರವಾಸ ಕೇಂದ್ರಗಳಲ್ಲಿ ಕಾನೂನು ಬಾಹಿರ ಮಾದಕ ಪಾನಿಯಗಳ ಪಾರ್ಟಿ ಆಯೋಜನೆಗೆ ಸಿದ್ಧತೆ ನಡೆದಿದ್ದು ಅದಕ್ಕೆ ಜಿಲ್ಲಾಡಳಿತ, ಪೊಲೀಸರು ಅನುಮತಿ, ಅವಕಾಶ ನೀಡಬಾರದು ಎಂದು ಕೋರಿದರು.

ಆಂಗ್ಲ ಹೊಸವರ್ಷ ಆಚರಣೆ ಹೆಸರಿನಲ್ಲಿ ನಡೆಯುವ ಇಂತಹ ಪಾಶ್ಚಾತ್ಯ ಸಂಸ್ಕೃತಿಯ ಪಾರ್ಟಿಗಳನ್ನು ಹಿಂದೂ ಹಿತ ರಕ್ಷಣಾ ವೇದಿಕೆ ತೀವ್ರವಾಗಿ ವಿರೋಧಿಸುತ್ತದೆ. ಲವ್ ಜಿಹಾದ್ ಹೆಸರಿನಲ್ಲಿ ಮುಗ್ದ ಹೆಣ್ಣುಮಕ್ಕಳ ಮನಸ್ಸು ಕೆಡಿಸಿ ಮೋಸದಿಂದ ಇಂತಹ ಕಾನೂನು ಬಾಹಿರ ಕಾರ್ಯಕ್ರಮಗಳಲ್ಲಿ ಭಾಗವಹಿಸುವಂತೆ ಪ್ರಚೋದಿಸಲಾಗುತ್ತದೆ. ಕೇರಳ, ಬಿಹಾರ್, ರಾಜಸ್ಥಾನ, ಪಶ್ಚಿಮ ಬಂಗಾಲ ಹಾಗೂ ಅನೇಕ ರಾಜ್ಯಗಳ ಅನ್ಯಧರ್ಮಿಯವ ಯುವಕರು ಇಂತಹ ಕಾರ್ಯಕ್ರಮ ಆಯೋಜನೆಯಲ್ಲಿ ಸಕ್ರಿಯರಾಗಿದ್ದು ಡ್ರಗ್ಸ್ ಮಾಫಿಯಾ, ಸೆಕ್ಸ್ ಮಾಫಿಯಾ ಜಾಲಗಳು ವ್ಯಾಪಕವಾಗಿ ಹರಡುತ್ತಿವೆ. ಆದ್ದರಿಂದ ಜಿಲ್ಲೆಯ ಯಾವುದೇ ಲಾಡ್ಜ್, ಹೋಂಸ್ಟೇ, ರೆಸಾರ್ಟ್, ಪ್ರವಾಸಿ ತಾಣ, ಧಾರ್ಮಿಕ ಕ್ಷೇತ್ರಗಳಲ್ಲಿ ಇಂತಹ ಪಾರ್ಟಿಗಳಿಗೆ ಅನುಮತಿ ನೀಡಬಾರದು ಹಾಗೂ ಅಕ್ರಮವಾಗಿ ಯಾರೂ ಪಾರ್ಟಿ ನಡೆಸದಂತೆ ಕ್ರಮ ಜರುಗಿಸಲು ಎಚ್ಚರವಹಿಸಬೇಕು ಎಂದು ಮಂಜುಭಾರ್ಗವ್ ಹಾಗೂ ವೇದಿಕೆ ಸದಸ್ಯರು ಮನವಿ ಮಾಡಿದರು.

## ವಿವಿಧ ಯೋಜನೆಗಳಡಿ ಆರ್ಥಿಕ ನೆರವು : ಅರ್ಜಿ ಆಹ್ವಾನ

ತುಮಕೂರು: ಕುಣಿಗಲ್ ಪುರಸಭಾ ವತಿಯಿಂದ ಕುಣಿಗಲ್ ವ್ಯಾಪ್ತಿಗೆ ಒಳಪಡುವ ಸಾರ್ವಜನಿಕರಿಗೆ ವಿವಿಧ ಯೋಜನೆಗಳಡಿ ಆರ್ಥಿಕ ನೆರವು ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ವಿವಿಧ ಹಂತದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ಇತರೆ ಬಡ ವಿದ್ಯಾರ್ಥಿಗಳಿಗೆ ಸಹಾಯಧನದ ನೆರವು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ರೋಗಿಗಳಿಗೆ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆಗೆ ಧನ ಸಹಾಯ, ವಿಕಲಚೇತನ ಸಣ್ಣ ಉದ್ದಿಮೆದಾರರಿಗೆ ಸಹಾಯಧನ, ರಾಜ್ಯ/ರಾಷ್ಟ್ರೀಯ ಕ್ರೀಡೆ/ಕಲೆ/ಸಾಂಸ್ಕೃತಿಕ ಹಾಗೂ ಇತರೆ ವ್ಯಾಸಂಗೇತರ ಚಟುವಟಿಕೆಗಳ ಸ್ಪರ್ಧೆಗಳಲ್ಲಿ ಭಾಗವಹಿಸಿರುವ ಮತ್ತು ಜಯಗಳಿಸಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡಲಾಗುವುದು.

ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕಡೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಯನ್ನು ಪುರಸಭಾ ಕಾರ್ಯಾಲಯದ ಯೋಜನಾ ಶಾಖೆಯ ವಿಷಯ ನಿರ್ವಾಹಕರಿಂದ ಪಡೆಯಬಹುದಾಗಿದೆ ಎಂದು ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಬಕಾರಿ ಸನ್ನದುಗಳ ಇ-ಹರಾಜು : ಜ.5ರಂದು ತರಬೇತಿ

ತುಮಕೂರು: ಸರ್ಕಾರದ ಅಧಿಸೂಚನೆಯನ್ವಯ ತುಮಕೂರು ಜಿಲ್ಲೆಗೆ 22 CL2(A) ಮತ್ತು 2 CL9(A) ಅಬಕಾರಿ ಸನ್ನದುಗಳನ್ನು ಹಂಚಿಕೆ ಮಾಡಲಾಗಿದ್ದು, ಸನ್ನದುಗಳ ಇ-ಹರಾಜಿಗೆ ಸಂಬಂಧಿಸಿದಂತೆ ಜನವರಿ 5ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ: ಗುಬ್ಬಿ ವೀರಣ್ಣ ಕಲಾಕ್ಷೇತ್ರದಲ್ಲಿ ತರಬೇತಿ ಆಯೋಜಿಸಲಾಗಿದೆ. ಆಸಕ್ತ ಅರ್ಜಿದಾರರು ತರಬೇತಿಗೆ ಹಾಜರಾಗಿ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ https://www.mstcecommerce.com, https://stateexcise.karnataka.gov.in ಅನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಲೆಕ್ಕ ಪರಿಶೋಧನಾ ವರದಿ ನೀಡಲು ಸೂಚನೆ

ತುಮಕೂರು: ಜಿಲ್ಲಾ ವ್ಯಾಪ್ತಿಯಲ್ಲಿರುವ ಎಲ್ಲಾ ಸಹಕಾರ ಸಂಘ/ಸೌಹಾರ್ದ ಸಹಕಾರಿಗಳು ಸಾಮಾನ್ಯ ಸಭೆಯಲ್ಲಿ 2025-26ನೇ ಸಾಲಿನ ಲೆಕ್ಕಪರಿಶೋಧನೆಗಾಗಿ ಲೆಕ್ಕ ಪರಿಶೋಧಕರನ್ನು ಆಯ್ಕೆ ಮಾಡಿಕೊಂಡು ಸಭಾ ನಡಾವಳಿ ಪ್ರತಿಯನ್ನು ಸಂಘದ ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರಿಂದ ಜಂಟಿಯಾಗಿ ದೃಢೀಕರಿಸಿ ಸಲ್ಲಿಸಬೇಕೆಂದು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕ ಎಂ. ರವಿ ತಿಳಿಸಿದ್ದಾರೆ. ಪ್ರತಿ ಸಹಕಾರ ಸಂಘವು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು ಅನುಮೋದಿಸುವ ಅರ್ಹ ಲೆಕ್ಕಪರಿಶೋಧಕರಿಂದ ತಮ್ಮ ಸಂಘದ ಲೆಕ್ಕಪತ್ರಗಳನ್ನು ಮಾಡಿಸಿ ವರದಿಯನ್ನು ಪಡೆದು ವಾರ್ಷಿಕ ಮಹಾಸಭೆಯಲ್ಲಿ ಮಂಡಿಸಬೇಕಾಗಿರುವುದರಿಂದ ಈ ಕೂಡಲೇ ವರದಿಯನ್ನು ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರ ಕಚೇರಿ, 13ನೇ ಕ್ರಾಸ್, ಎಸ್.ಎಸ್.ಪುರಂ, ತುಮಕೂರು ಇವರಿಗೆ ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.

## ಬ್ಯೂಟಿ ಪಾರ್ಲರ್ ತರಬೇತಿಗೆ ಅರ್ಜಿ ಆಹ್ವಾನ

ತುಮಕೂರು: ಎಸ್‌ಬಿಐ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯು ಜನವರಿ 16 ರಿಂದ ಗ್ರಾಮೀಣ ಭಾಗದ ನಿರುದ್ಯೋಗಿ ಯುವತಿಯರಿಗಾಗಿ ಉಚಿತವಾಗಿ 35 ದಿನಗಳ ಬ್ಯೂಟಿ ಪಾರ್ಲರ್ ತರಬೇತಿ ನೀಡಲು ಅರ್ಜಿ ಆಹ್ವಾನಿಸಿದೆ. ತರಬೇತಿ ಅವಧಿಯಲ್ಲಿ ಉಚಿತ ಊಟ ಮತ್ತು ವಸತಿ ಸೌಲಭ್ಯ ಕಲ್ಪಿಸಲಾಗುವುದು. ಕನ್ನಡ ಓದಲು ಮತ್ತು ಬರೆಯಲು ಬರುವ 18 ರಿಂದ 50 ವರ್ಷದೊಳಗಿನ ಅರ್ಹ ಅಭ್ಯರ್ಥಿಗಳು 2026ರ ಜನವರಿ 10ರೊಳಗಾಗಿ ಖುದ್ದಾಗಿ ಅಥವಾ ಅಂಚೆ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಉದ್ಯೋಗ ತರಬೇತಿ ಸಂಸ್ಥೆ, ಸಿಂಗನಹಳ್ಳಿ ಕಾಲೋನಿ, ಹಿರೇಹಳ್ಳಿ ಕೈಗಾರಿಕಾ ಪ್ರದೇಶ(ತುಮಕೂರು ನಿರ್ಮಿತಿ ಕೇಂದ್ರದ ಹತ್ತಿರ), ತುಮಕೂರು-572104 ಅಥವಾ ಮೊ.ಸಂ.9738351048, 9663680001ನ್ನು ಸಂಪರ್ಕಿಸಬಹುದಾಗಿದೆ ಎಂದು ಸಂಸ್ಥೆಯ ನಿರ್ದೇಶಕ ವಾದಿರಾಜ ಕೆ.ಎನ್. ಅವರು ತಿಳಿಸಿದ್ದಾರೆ.

## ಹ್ಯಾಂಡ್ ಎಂಬ್ರಾಯ್ಡರಿ, ಫ್ಯಾಬ್ರಿಕ್ ಪೇಂಟಿಂಗ್ ತರಬೇತಿಗೆ ಅರ್ಜಿ ಆಹ್ವಾನ

ತುಮಕೂರು: ಎಸ್‌ಬಿಐ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯು ಜನವರಿ 19 ರಿಂದ ಗ್ರಾಮೀಣ ಭಾಗದ ನಿರುದ್ಯೋಗಿ ಯುವತಿಯರಿಗಾಗಿ ಉಚಿತವಾಗಿ 31 ದಿನಗಳ ಹ್ಯಾಂಡ್ ಎಂಬ್ರಾಯ್ಡರಿ ಮತ್ತು ಫ್ಯಾಬ್ರಿಕ್ ಪೇಂಟಿಂಗ್ ತರಬೇತಿ ನೀಡಲು ಅರ್ಜಿ ಆಹ್ವಾನಿಸಿದೆ.

ತರಬೇತಿ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ಸೌಲಭ್ಯ ಕಲ್ಪಿಸಲಾಗುವುದು. ಕನ್ನಡ ಓದಲು ಮತ್ತು ಬರೆಯಲು ಬರುವ 18 ರಿಂದ 50 ವರ್ಷದೊಳಗಿನ ಅರ್ಹ ಅಭ್ಯರ್ಥಿಗಳು 2026ರ ಜನವರಿ 15ರೊಳಗಾಗಿ ಖುದ್ದಾಗಿ ಅಥವಾ ಅಂಚೆ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಉದ್ಯೋಗ ತರಬೇತಿ ಸಂಸ್ಥೆ, ಸಿಂಗನಹಳ್ಳಿ ಕಾಲೋನಿ, ಹಿರೇಹಳ್ಳಿ ಕೈಗಾರಿಕಾ ಪ್ರದೇಶ(ತುಮಕೂರು ನಿರ್ಮಿತಿ ಕೇಂದ್ರದ ಹತ್ತಿರ), ತುಮಕೂರು-572104 ಅಥವಾ ಮೊ.ಸಂ.9738351048, 9663680001ನ್ನು ಸಂಪರ್ಕಿಸಬಹುದಾಗಿದೆ ಎಂದು ಸಂಸ್ಥೆಯ ನಿರ್ದೇಶಕ ವಾದಿರಾಜ ಕೆ.ಎನ್. ಅವರು ತಿಳಿಸಿದ್ದಾರೆ.

## ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನ

ತುಮಕೂರು: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು 2025-26ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್‌ಡಿ ಅಧ್ಯಯನ ಪ್ರಾರಂಭಿಸಿರುವ ಜಿಲ್ಲೆಯ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಹಾಗೂ 3ಬಿಗೆ ಸೇರಿದ ಅಭ್ಯರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಅರ್ಜಿ ಆಹ್ವಾನಿಸಿದೆ.

ಅರ್ಹ ಅಭ್ಯರ್ಥಿಗಳು 2025ರ ಫೆಬ್ರವರಿ 10 ಮತ್ತು ಅದರ ನಂತರ ಪ್ರಥಮ ವರ್ಷದ ಪಿಎಚ್.ಡಿ ಪ್ರಾರಂಭಿಸಿರಬೇಕು. ಕರ್ನಾಟಕದ ಶಾಸನಬದ್ಧ ವಿಶ್ವ ವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿಎಚ್‌ಡಿ ಅಧ್ಯಯನ ಮಾಡುತ್ತಿರುವ ಹೊಸ ವಿದ್ಯಾರ್ಥಿಗಳು ಮಾತ್ರ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಜನವರಿ 9 ಕಡೆಯದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್‌ಸೈಟ್ https://bcwd.karnataka.gov.in ನಲ್ಲಿ ಅಥವಾ ದೂ.ವಾ.ಸಂ. 8050770004ನ್ನು ಸಂಪರ್ಕಿಸಿ ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ದ.ಸಂ.ಸ. ಮಾಜಿ ಸಂಚಾಲಕ, ಹೋರಾಟಗಾರ ಬಂದಕುಂಟೆ ನಾಗರಾಜಯ್ಯ ನಿಧನ

ತುಮಕೂರು :ತುಮಕೂರು ಜಿಲ್ಲೆಯ ದಲಿತ ಸಂಘರ್ಷ ಸಮಿತಿಯ ಸಂಚಾಲರು ಹಾಗೂ ದಲಿತ ಹೋರಾಟಗಾರ ನಾಗರಾಜು ಬಂದಕುಂಟೆ (70 ವರ್ಷ) ಇಂದು ಬೆಳಿಗ್ಗೆ 9 ಗಂಟೆಯಲ್ಲಿ ನಿಧನ ಹೊಂದಿದ್ದಾರೆ. ದಸಂಸ ಹೋರಾಟದ ಸಂದರ್ಭದಲ್ಲಿ ಗೂಳೂರು ಸಮೀಪದ ಹೊನ್ನೇನಹಳ್ಳಿ ಭೂ ಹೋರಾಟದಲ್ಲಿ ನಾಗರಾಜು ಅವರನ್ನು ಹೊಡೆದು ಸುಡಲು ಹುಲ್ಲು ಹಾಕಿ ಮುಚ್ಚಿ ಬೆಂಕಿ ಹಚ್ಚಬೇಕು ಅನ್ನುವ ವೇಳೆಯಲ್ಲಿ ದಸಂಸನ ಹೋರಾಟಗಾರರು, ಮಂಡಿಪೇಟೆ ಮಂಡಿಕೂಲಿಕಾರರು, ಹಮಾಲಿಗಳು, ಎನ್.ಆರ್.ಕಾಲೋನಿಯ ದಸಂಸ ಮುಖಂಡರು ಲಾರಿಯಲ್ಲಿ ಬಂದು ಉಳಿಸಿದ್ದರು. ದಸಂಸ ದಿಂದ ಹಲವಾರು ಭೂ ಹೋರಾಟ, ಅಸ್ಪೃಶ್ಯ ವಿರೋಧಿ, ಹೆಂಡಬೇಡ ಶಾಲೆಬೇಕು ಹೋರಾಟದಲ್ಲಿ ರಂಗಸ್ವಾಮಿ ಬೆಲ್ಲದಮಡು ಸೇರಿ ಹೋರಾಟವನ್ನು ನಡೆಸಿದ್ದರು. ಹೇಮಾವತಿಯ ಹೋರಾಟದ 'ಕಾವೇರಿ ಉಳಿಯಲಿ ಹೇಮಾವತಿ ಹರಿಯಲಿ' ನೀರಾವರಿ ಹೋರಾಟದಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಇವರು ಕುಣಿಗಲ್ ತಾಲ್ಲೂಕಿನಯಲ್ಲಿಯೂರು ಮತ್ತು ಕಗ್ಗೆರೆಯಲ್ಲಿ ಅನುದಾನಿತ ಶಾಲೆಯಲ್ಲಿ ಇಂಗ್ಲಿಷ್ ಶಿಕ್ಷಕರಾಗಿದ್ದರು, ಮುಖ್ಯ ಶಿಕ್ಷಕರಾಗಲು ಡಿಡಿಪಿಐ ಮತ್ತು ಶಿಕ್ಷಣ ಇಲಾಖೆಯ ವಿರುದ್ಧದೊಡ್ಡ ಹೋರಾಟವನ್ನೇ ಮಾಡಿದರೂ ಮುಖ್ಯ ಶಿಕ್ಷಕ ಹುದ್ದೆ ದಕ್ಕಿಸಿಕೊಳ್ಳಲಾಗಲಿಲ್ಲ. ಬಂದಕುಂಟೆ ನಾಗರಾಜು ಅವರು ನಿವೃತ್ತಿಯ ನಂತರ 'ಬಿತ್ತನೆ ಬೀಜ' ಎಂಬ ತಮ್ಮ ಹೋರಾಟದ



ಬದುಕಿನ ಪುಸ್ತಕವನ್ನು ಬರೆದು ಪ್ರಕಟಿಸಿದ್ದರು. ಕಳೆದ 9 ವರ್ಷಗಳ ಹಿಂದೆ ಪಾರ್ಶ್ವವಾಯುಗೆ ಒಳಗಾಗಿದ್ದ ನಾಗರಾಜು ಅವರು, ಚೇತರಿಸಿಕೊಂಡಿದ್ದರು, ಇಂದು ಬೆಳಿಗ್ಗೆ 9 ಗಂಟೆ ಸಮಯದಲ್ಲಿ ಹೃದಯಾಘಾತದಿಂದ ಮೃತ ಪಟ್ಟಿರುವುದಾಗಿ ಕುಟುಂಬ ಮೂಲಗಳು ತಿಳಿಸಿವೆ. ಮೃತರುಪತ್ನಿ,ಮೂವರುಗಂಡುಮಕ್ಕಳನ್ನಅಗಲಿದ್ದಾರೆ. ಗೆಳೆಯರಾದ ಕೆ.ದೊರೈರಾಜ್, ನರಸೀಯಪ್ಪ, ನರಸಿಂಹಯ್ಯ, ಕುಂದೂರು ತಿಮ್ಮಯ್ಯ, ಹೆಚ್. ಕೆಂಚಮಾರಯ್ಯ, ಸಾಹಿತಿಗಳಾದ ತುಂಬಾಡಿ ರಾಮಯ್ಯ, ವಡ್ಡಗೆರೆ ನಾಗರಾಜಯ್ಯ, ಡಾ.ಡಿ.ಅರಂಧತಿ, ಡಾ.ಹೆಚ್.ವಿ ರಂಗಸ್ವಾಮಿ, ಚರಕ ಆಸ್ಪತ್ರೆಯ ಡಾ.ಬಸವರಾಜು, ಒಳಮೀಸಲಾತಿ ಹೋರಾಟ ಸಮಿತಿ ಅಧ್ಯಕ್ಷರಾದ ವೈ.ಕೆ.ಬಾಲ ಕೃಷ್ಣಪ್ಪ, ವಿರುಪಾಕ್ಷ ಡ್ಯಾಗೇರಹಳ್ಳಿ, ಎಂ.ಸಿ.ನರಸಿಂಹಮೂರ್ತಿ ಮುಂತಾದವರು ಭೇಟಿ ನೀಡಿಅಂತಿಮ ನಮನ ಸಲ್ಲಿಸಿ, ಒಂದು ನಿಮಿಷದ ಮೌನ ಆಚರಿಸಿದರು. ಮೃತರಅಂತ್ಯ ಸಂಸ್ಕಾರ ಶಿರಾ ತಾಲ್ಲೂಕು ಬಂದಕುಂಟೆಯಲ್ಲಿ ಸಂಜೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

## ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಗೆ ಅವಿನಾಭಾವ ಸಂಬಂಧ



ನೆರವೇರಿಸಿ ಮಾತನಾಡಿದ ಅವರು, ಇಂದಿನ ದಿನಗಳಲ್ಲಿ ಆಂಗ್ಲಪದಗಳ ಅತಿಯಾದ ಬಳಕೆ ನಮ್ಮ ಭಾಷಾ ಆತ್ಮವಿಶ್ವಾಸವನ್ನು ಕುಗ್ಗಿಸುತ್ತಿದೆ. ಆದರೆ ಕನ್ನಡ ಸಾಹಿತ್ಯ ಪರಂಪರೆ ನಮ್ಮ ಹೆಮ್ಮೆ. ಹಲವಾರು ಕವಿವರರು, ಐತಿಹಾಸಿಕ ಕಾದಂಬರಿಕಾರರು ಕನ್ನಡಮ್ಮನ ಮಮತೆಯ ಗುಣವಿಶೇಷಗಳನ್ನು, ಕನ್ನಡಿಗರ ಜೀವನಶೈಲಿ ಹಾಗೂ ಸಾಧನೆಯನ್ನು ಲೋಕದ ಗಮನಕ್ಕೆ ತಂದಿದ್ದಾರೆ ಎಂದು ಸ್ಮರಿಸಿದರು. ಸಾಹಿತ್ಯಸಮ್ಮೇಳನಗಳು ನಮ್ಮ ಹಿಂದಿನ ಬರಹಗಾರರು ಕಂಡ ಕನ್ನಡದ ಉಜ್ವಲ ಭವಿಷ್ಯದ ಕನಸನ್ನು ಸಾಕಾರಗೊಳಿಸುವ ಪೂರಕ ವೇದಿಕೆಗಳಾಗುತ್ತಿವೆ. ಆದರೆ ಅದಕ್ಕಾಗಿ ಹೊರಗೆ ಹೇಗೋ ಹಾಗೆಯೇ ಅಂತರಂಗದಲ್ಲೂ 'ಉಸಿರು ಕನ್ನಡವಾಗುವಂತೆ' ಪ್ರತಿಯೊಬ್ಬರೂ ಪಣತೊಡಬೇಕು ಎಂದು ಕರೆ ನೀಡಿದರು.

ಮನೆ-ಮನೆಗಳಲ್ಲಿ ಪುಸ್ತಕ ಸಂಗ್ರಹ, ನಿರಂತರ ಓದು, ವಿಚಾರ ವಿನಿಮಯ, ಸಂವಾದ, ಕವಿತಾ ವಾಚನ, ಕಥಾ ರಚನೆ ತರಬೇತಿ ಮುಂತಾದ ಸಾಹಿತ್ಯ ಚಟುವಟಿಕೆಗಳನ್ನು ಉತ್ತೇಜಿಸುವ ಅಗತ್ಯವಿದೆ ಎಂದ ಅವರು, ಬರಹಗಾರರು, ಓದುಗರು, ಸಾಹಿತ್ಯ ಪೋಷಕರು, ಸ್ವಯಂಸೇವಾ ಸಂಘಟನೆಗಳು ಹಾಗೂ ಮಕ್ಕಳ ಸಾಹಿತ್ಯ ಪರಿಷತ್ತು ಒಂದಾಗಿ ಸಾಹಿತ್ಯದ ಆಗುಹೋಗುಗಳ ವಿಚಾರ ಚರ್ಚಿಸಿ, ನವೀನ ಮಾರ್ಗಗಳನ್ನು ಶೋಧಿಸುವ ಮೂಲಕ ಸದಭಿರುಚಿಯ ಸಾಹಿತ್ಯ ರಚನೆ ಹಾಗೂ ಪ್ರಸಾರದತ್ತ ಕ್ರಿಯಾಶೀಲರಾಗಬೇಕು ಎಂದು ಸಲಹೆ ನೀಡಿದರು. ಶಾಲೆಗಳಲ್ಲೂ ಹೆಚ್ಚು ಹೆಚ್ಚು ಸಾಹಿತ್ಯ ಚಟುವಟಿಕೆಗಳು ಆಯೋಜನೆಯಾಗಲಿ ಎಂದು ಆಶಿಸಿದ ಅವರು, ಕನ್ನಡದ ಭವಿಷ್ಯ ಯುವ ಪೀಳಿಗೆಯ ಕೈಯಲ್ಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಸ್. ಸಿದ್ಧಲಿಂಗಪ್ಪ, ತಹಸೀಲ್ದಾರ್ ರಾಜೇಶ್ವರಿ ಹಾಗೂ ಕನ್ನಡ ಸೇನೆ ಪದಾಧಿಕಾರಿಗಳಾದ ಧನಿಯಾಕುಮಾರ್, ಶಬ್ಬೀರ್ ಅಹ್ಮದ್, ನಟರಾಜ್ ಶೆಟ್ಟಿ, ಮಲ್ಲಿಕಾರ್ಜುನಯ್ಯ, ಉಮಾ ಮಹೇಶ್, ಗುರು ರಾಘವೇಂದ್ರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ವರ್ಗಾವಣೆ ಹಾಗೂ ನಿವೃತ್ತಿಗೊಂಡ ಶಿಕ್ಷಕರಿಗೆ ಹೃದಯ ಸ್ಪರ್ಶಿ ಬೀಳ್ಕೊಡುಗೆ



ಶಿರಾ : ಗುರು ಕಲಿಸಿದ ವಿದ್ಯೆ , ಸಹನೆ,ವಿನಯ, ಗುಣಮಟ್ಟದ ಶಿಕ್ಷಣ ಹಾಗೂ ಸಮಾಜದಲ್ಲಿ ಎಲ್ಲರನ್ನು ಸಮಾನರಂತೆ ಕಾಣುತ್ತ ಗುರು ಹಿರಿಯರನ್ನು ಗೌರವಿಸುವ ಸಂಸ್ಕಾರ ಹೀಗೆ ಎಲ್ಲವನ್ನು ಸರ್ಕಾರಿ ಶಾಲೆಯಲ್ಲಿ ಶಿಕ್ಷಕರು ಕಲಿಸಿದ ಕಾರಣ, ವಿದ್ಯೆ ಕಲಿಸಿದ ಗುರುವನ್ನು ಗೌರವಿಸ ಬೇಕೆಂಬ ದೃಢಸಂಕಲ್ಪ ಹಳೆಯ ವಿದ್ಯಾರ್ಥಿಗಳಲ್ಲಿ ಮೂಡಿರುವುದು ನಾನು ಶಿಕ್ಷಕನಾಗಿದ್ದಕ್ಕೂ ಸಾರ್ಥಕವಾಯಿತು ಎಂಬ ಮನೋಭಾವ ನನ್ನಲ್ಲಿ ಮೂಡಿಸಿದೆ ಎಂದು ಶಿಕ್ಷಕ ಎಲ್. ನರಸಿಂಹರಾಜು ಹೇಳಿದರು.

ಶಿರಾ ತಾಲೂಕಿನ ಹನುಮನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಹಳೆಯ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಭಾನುವಾರ ಆಯೋಜಿಸಿದ್ದ ವರ್ಗಾವಣೆಗೊಂಡ ಶಿಕ್ಷಕರಿಗೆ ಬೀಳ್ಕೊಡುಗೆ ಹಾಗೂ ನಿವೃತ್ತ ಶಿಕ್ಷಕರಿಗೆ ಗುರು ನಮನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿ ಓದಿದ ವಿದ್ಯಾರ್ಥಿಗಳು ಐಎಎಸ್,ಐಪಿಎಸ್, ಕೆಎಎಸ್ ನಂತಹ ಉನ್ನತ ಹುದ್ದೆಗಳನ್ನು ಪಡೆದಿದ್ದಾರೆ, ಇದಕ್ಕೆ ಸರ್ಕಾರಿ ಶಾಲೆಗಳ ಶಿಕ್ಷಕರ ಬದ್ಧತೆ, ವಿದ್ಯಾರ್ಥಿಗಳಿಗೆ ಪರಿಪೂರ್ಣ ಶಿಕ್ಷಣ ನೀಡಬೇಕೆಂಬ ಹಂಬಲವೇ ಕಾರಣ, ಹನುಮನಹಳ್ಳಿ ಗ್ರಾಮಸ್ಥರು ಹಾಗೂ ಹಳೆ ವಿದ್ಯಾರ್ಥಿಗಳು ನೀಡಿದ ಈ ಹೃದಯಸ್ಪರ್ಶಿ ಬೀಳ್ಕೊಡುಗೆ ನನ್ನ ಜೀವನದಲ್ಲಿ ಎಂದೂ ಮರೆಯಲಾಗದ ಸುಂದರ ಕ್ಷಣ ಎಂದರು.

ನಿವೃತ್ತ ಶಿಕ್ಷಕರಾದ ಶಿವರುದ್ರಪ್ಪ, ಟಿ.ಆರ್. ಮಂಜುನಾಥ್, ಜಿ. ಶಿವಶಂಕರಯ್ಯ, ಮಾರಣ್ಣ, ರಮೇಶ್, ಶ್ರೀನಿವಾಸ್, ಮೇಲ್ಕುಂಟೆ ಗ್ರಾಮ ಪಂಚಾಯತಿ ಅಧ್ಯಕ್ಷ ಲಕ್ಷ್ಮಣ್, ಸದಸ್ಯೆ ಜ್ಯೋತಿ ನರಸಿಂಹಮೂರ್ತಿ, ಮಾಜಿ ಸದಸ್ಯ ಸುರೇಶ್ , ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕಾರ್ಯದರ್ಶಿ ದೇವರಾಜು, ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷ ಗೋಪಾಲಕೃಷ್ಣ, ಮುಖಂಡ ಜೋಡಿ ಬ್ರದರ್ಸ್ ಕೃಷ್ಣಮೂರ್ತಿ, ಶಿಕ್ಷಣ ಸಂಪನ್ಮೂಲ ವ್ಯಕ್ತಿಗಳಾದ ಹೆಚ್. ಜಿ. ಮಂಜುನಾಥ್, ರಮೇಶ್, ಮುಖ್ಯ ಶಿಕ್ಷಕರ ರಾಮ ಹನುಮಯ್ಯ, ಶಿಕ್ಷಕ ಎಂ. ಆರ್. ಶ್ರೀ ರಂಗ, ಗಿರೀಶ್, ನಾರಾಯಣಪ್ಪ, ತಿಪ್ಪೇಸ್ವಾಮಿ ಸೇರಿದಂತೆ ಹಲವಾರು ಶಿಕ್ಷಕರು , ಹಳೆಯ ವಿದ್ಯಾರ್ಥಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು.

## ರೈತರಿಗಾಗಿ ಪೌತಿ ಖಾತೆ ಅಂದೋಲನ ಸದ್ಬಳಕೆ ಮಾಡಿಕೊಂಡು ಸರ್ಕಾರಿ ಸೌಲಭ್ಯ ಬಳಸಿಕೊಳ್ಳಿ - ಶಾಸಕ ಸಿ.ಬಿ. ಸುರೇಶ್ ಬಾಬು

ಚಿಕ್ಕನಾಯಕನಹಳ್ಳಿ:-ಪಿತ್ರಾರ್ಜಿತ ಆಸ್ತಿಯನ್ನು ಹಿರಿಯರು ಮರಣಹೊಂದಿದ ನಂತರ ಖಾತೆ ಮಾಡಿಸಿಕೊಂಡು ಸರ್ಕಾರಿ ಸೌಲಭ್ಯಗಳನ್ನು ಬಳಸಿಕೊಳ್ಳಲು ರೈತರಿಗಾಗಿ ಈ ಪೌತಿ ಖಾತಾ ಅಂದೋಲನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು ಇದನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಶಾಸಕ ಸಿ.ಬಿ.ಸುರೇಶ್ಬಾಬು ತಿಳಿಸಿದರು.



ಪಟ್ಟಣದ ತೀನಂಶ್ರೀ ಭವನದಲ್ಲಿ ಸೋಮವಾರ ಜಿಲ್ಲಾ ಹಾಗೂ ತಾಲ್ಲೂಕು ಆಡಳಿತದ ವತಿಯಿಂದ ಏರ್ಪಡಿಸಲಾಗಿದ್ದ ಪೌತಿ ಅಂದೋಲನ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಹಲವಾರು ವರ್ಷಗಳಿಂದ ಅನೇಕ ಕಾರಣಗಳಿಂದಾಗಿ ಪೌತಿ ಖಾತೆಗಳು ಆಗದೇ ರೈತರು ತಮ್ಮ ಭೂಮಿಗೆ ಸರ್ಕಾರ ನೀಡುವಂತಹ ಸೌಲಭ್ಯಗಳನ್ನು ಪಡೆಯಲು ಸಾದ್ಯವಾಗುತ್ತಿಲ್ಲವೆಂದು ಹಾಗೂ ಅನೇಕ ದಾಖಲೆಗಳನ್ನು ಮತ್ತು ಮರಣ ದೃಡೀಕರಣ ಪತ್ರಗಳು ಇಲ್ಲದೆ ಇರುವುದು ಸೇರಿದಂತೆ ಹಲವಾರು ಕಾರಣಗಳಿಂದ ಪೌತಿ ಖಾತೆ ಮಾಡಿಸಲು ಸಾದ್ಯವಾಗಿರುವುದಿಲ್ಲವೆಂಬ ಸಮಸ್ಯೆ ಅನೇಕ ಬಾರಿ ಸಭೆಗಳಲ್ಲಿ ರೈತರಿಂದ ಕೇಳಿಬಂದ ಹಿನ್ನೆಲೆಯಲ್ಲಿ ಈ ಪೌತಿ ಖಾತೆ ಅಂದೋಲನವನ್ನು ಏರ್ಪಡಿಸಲಾಗಿದೆ. ಎಂದ ಅವರು ತಾಲ್ಲೂಕಿನಲ್ಲಿ ಇನ್ನು 40ಸಾವಿರಕ್ಕು ಹೆಚ್ಚು ಪೌತಿ ಖಾತೆಗಳನ್ನು ಮಾಡಲು ಬಾಕಿ ಇರುವ ಪ್ರಕರಣಗಳು ಇರುವುದು ತಿಳಿದು ಬಂದಿದ್ದು, ಇನ್ನಾದರು ರೈತರು ತಮ್ಮ ದಾಖಲೆಗಳನ್ನು ಸರಿಯಾಗಿ ನೀಡಿ ಪೌತಿ ಖಾತೆಗಳನ್ನು ಮಾಡಿಸಿಕೊಂಡು ಅಗತ್ಯವಿರುವಂತಹ ಸರ್ಕಾರಿ ಸೌಲಭ್ಯಗಳನ್ನು ಪಡೆದು ಕೊಳ್ಳುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಹಸೀಲ್ದಾರ್ ಮಮತಾ ಎಂ ಮಾತನಾಡಿ ಅಗತ್ಯದಾಖಲೆಗಳನ್ನು ನೀಡಿ ತಮ್ಮ ಹಿರಿಯರ ಮರಣಹೊಂದಿದವರ ಹೆಸರಿನಲ್ಲಿರುವಂತಹ ಜಮೀನುಗಳನ್ನು ಈಗಿರುವಂತಹ ವಾರಸುದಾರರಿಗೆ ಪೌತಿ ವಾರಸು ಖಾತೆಯನ್ನು ಮಾಡಲಾಗುವುದು. ರೈತರು ಮರಣ ಹೊಂದಿದವರ ಮರಣ ದೃಡೀಕರಣ ಪತ್ರ, ಇಲ್ಲದಿದ್ದರೆ ರಾಜಸ್ವ ನಿರೀಕ್ಷಕರು, ಗ್ರಾಮಾಡಳಿತಾಧಿಕಾರಿಗಳಿಂದ ಗ್ರಾಮದಲ್ಲಿ ಮಹಜರ್ ಮಾಡಿಸಿದ ದೃಡೀಕರಣ ಪತ್ರ, ಪಹಣಿಯೊಂದಿಗೆ ಅವರಿಗೆ ಯಾವ ರೀತಿಯಲ್ಲಿ ಬಂದಿತು ಎಂಬ ಬಗ್ಗೆ ಎಂ.ಆರ್ ಕಾಪಿ, ವಂಶವೃಕ್ಷ , ವಂಶವೃಕ್ಷ ದೃಡೀಕರಣ ಪತ್ರ ಇದರೊಂದಿಗೆ ಯಾರ ಹೆಸರಿಗೆ ಖಾತೆ ಮಾಡಿಸಬೇಕೊ ಅವರೆಲ್ಲರ ಅಧಾರ್ ಕಾರ್ಡ್ ಹಾಗೂ ಅಧಾರ್ಕಾರ್ಡ್ಗೆ ಲಿಂಕ್ ಆಗಿರುವ ಮೊಬೈಲ್ ಇದರೊಂದಿಗೆ ಬಗರ್ಹುಕುಂ ಸಾಗುವಳಿ ಚೀಟಿಯನ್ನು ನೀಡಿದ್ದರೆ ಅಂತಹವರು ಸಾಗುವಳಿ ಚೀಟಿಯನ್ನು ನೀಡುವ ಮೂಲಕ ತಮ್ಮ ಪೌತಿ ಖಾತೆಗಳನ್ನು ಮಾಡಿಸಿಕೊಳ್ಳಿ ಎಂದರು. ಕಾರ್ಯಕ್ರಮದಲ್ಲಿ ಕಳೆದೊಂದು ವಾರದ ಹಿಂದೆಯೇ ಇದು ಪ್ರಚಾರ ಗೊಂಡಿದ್ದರ ಹಿನ್ನೆಲೆಯಲ್ಲಿ ಅಗತ್ಯದಾಖಲೆಗಳನ್ನು ನೀಡಿ ಪೌತಿ ಖಾತೆಗಳನ್ನು ಮಾಡಿಕೊಡಲು ಅರ್ಜಿಸಲ್ಲಿಸಿದ್ದವರಿಗೆ ಸ್ಥಳದಲ್ಲೇ ಪೌತಿ ಖಾತೆಯಿಂದ ಬದಲಾದ ಪಹಣಿಗಳನ್ನು ವಿತರಿಸಲಾಯಿತು.

ಒಟ್ಟು 69 ಅರ್ಜಿಗಳು ಪೌತಿ ಖಾತೆಗೆ ಸಲ್ಲಿಕೆಯಾಗಿದ್ದು ಇದರಲ್ಲಿ 13ಅರ್ಜಿಗಳು ಪರೀಶಿಲನೆಗೆ ಸಲ್ಲಿಕೆಯಾದವು.

ಈ ಸಂದರ್ಭದಲ್ಲಿ ಜಿಲ್ಲಾಕಚೇರಿಯ ಅಧಿಕಾರಿ ಸಂಗಮೇಶ್, ಉಪತಹಸೀಲ್ದಾರ್ಗಳಾದ ಯಶ್ವಂತ್, ವಿನುತ, ರೇಖಾ, ವಿಜಯ್ಕುಮಾರ್, ಆರ್ ಆರ್ ಶಿರಸ್ತೆದಾರ್ ವನಜಾಕ್ಷಮ್ಮ , ರಾಜಸ್ವ ನಿರೀಕ್ಷಕರುಗಳಾದ ಲೋಕೇಶ್, ಶ್ರೀನಿವಾಸ್, ದೀಪಕ್, ಹರೀಶ್ಕುಮಾರ್, ಶಿವಕುಮಾರ್ ಸೇರಿದಂತೆ ಇತರರು ಇದ್ದರು.

## ಅಂಬೇಡ್ಕರ್ ಎಂದರೆ ಒಂದು ಸಮಾಜಕ್ಕೆ ಸೀಮಿತವಲ್ಲ ಭಾರತದ ಪ್ರತಿಯೊಬ್ಬ ವ್ಯಕ್ತಿಯು ನೆನಪು ಮಾಡಿಕೊಳ್ಳುವ ದೇವರು

ಅಂಬೇಡ್ಕರ್ ಎಂದರೆ ಕೇವಲ ಒಂದು ಸಮಾಜಕ್ಕೆ ಸೀಮಿತವಲ್ಲ, ಇಡಿ ಭಾರತದ ಪ್ರತಿಯೊಬ್ಬ ವ್ಯಕ್ತಿಯು ನೆನಪು ಮಾಡಿಕೊಳ್ಳುವ ದೇವರು ಎಂದರೆ ತಪ್ಪಾಗಲಾರದು ಸಮಾಜ ಕಲ್ಯಾಣ ಇಲಾಖೆ ಹಾಗೂ ದಲಿತ ಸಂಘಟನೆಗಳು ಆಯೋಜಿಸಿದ್ದ ಡಾ ಬಿ ಆರ್ ಅಂಬೇಡ್ಕರ್ 69 ನೇ ಪರಿನಿಬ್ಬಾಣ ಕಾರ್ಯಕ್ರಮದಲ್ಲಿ ಮ್ ಮಾಜಿ ಸೈನಿಕ ನರಸಿಂಹಮೂರ್ತಿ ತಿಳಿಸಿದರು.



ಕೊರಟಗೆರೆ:-ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ಜಾತಿ ಪದ್ಧತಿಯ ನಿರ್ಮೂಲನೆಗಾಗಿ ಬುದ್ಧ, ಬಸವಣ್ಣ, ಅಂಬೇಡ್ಕರ್ ಮೊದಲಾದ ಮಹನೀಯರು.ವಿಶ್ವವಿದ್ಯಾಲಯಗಳಲ್ಲಿನ ಅಧ್ಯಯನ ಕೇಂದ್ರಗಳು ಮಹನೀಯರ ವಿಚಾರಧಾರೆಗಳು, ಆದರ್ಶಗಳನ್ನು ಜನರಿಗೆ ತಲುಪಿಸಬೇಕು' 'ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಎಲ್ಲರಿಗೂ ಸಮಾನ ಹಕ್ಕುಗಳು ಹಾಗೂ ಅವಕಾಶ ಕಲ್ಪಿಸಿದ್ದಾರೆ.ಅಂಬೇಡ್ಕರ್ ರವರ ವಿಚಾರಧಾರೆಗಳನ್ನು ಎಲ್ಲರೂ ಪಾಲಿಸಬೇಕು ಮುದ್ದು ರಂಗಯ್ಯ ಮಾತನಾಡಿ ಅವರ ಪ್ರತಿ ಹೆಜ್ಜೆಯ ಗುರುತುಗಳುನ್ನು ಇಲ್ಲಿಯೆ ಬಿಟ್ಟು ಹೋಗಿದ್ದಾರೆ.ನನ್ನ ಜನ ರಾಜ್ಯಾಧಿಕಾರ ರಾಷ್ಟ್ರಧಿಕಾರ ಪಡೆಯಬೇಕು ಎಂದು ಕನಸು ಕಂಡವರು ಸಮಾನತೆ ಸಹೋದರತೆಗಾಗಿ ದುಡಿಯುವ ಮನೋಭಾವ ಉಳ್ಳವರು ನಾನು ಮನುಷ್ಯನಿಗಿಂತ ಅತಿ ಹೆಚ್ಚು ಪುಸ್ತಕಗಳನ್ನು ಪ್ರೀತಿಸುತ್ತೇನೆ ಎಂದು ಹೇಳಿದವರು ಬಾಬಾ ಸಾಹೇಬರು. ಅವರು ಬೇರೆ ಬೇರೆ ದೇಶಗಳಲ್ಲಿ ವಿದ್ಯಾಭ್ಯಾಸ ಮುಗಿಸಿ ಮನಸ್ಸು ಮಾಡಿದರೆ ಅಲ್ಲಿಯೇ ಐಶಾರಾಮಿ ಜೀವನ ಮಾಡಬಹುದಿತ್ತು. ಆದರೆ ನನ್ನ ದೇಶ ನನ್ನ ಜನ ಮುಂದೆ ಬರಬೇಕು ಎಂದು ಭಾರತಕ್ಕೆ ಮರಳಿದರು. ಒಂದು ವೇಳೆ ಅವರು ಪ್ರದೇಶದಲ್ಲಿ ಉಳಿದಿದ್ದರೆ ನಮ್ಮ ಭವಿಷ್ಯ ಏನಾಗುತ್ತಿತ್ತು ಎಂದು ಒಂದು ನಿಮಿಷ ಯೋಚಿಸಬೇಕಿದೆ. ನಮ್ಮಲ್ಲಿ ಕೇವಲ ಒಂದು ಜನಾಂಗಕ್ಕೆ ಮಾತ್ರ ಸೀಮಿತ ಎಂದು ಬಿಂಬಿಸುವುದು ಬಹಳ ದುಃಖದ ಸಂಗತಿ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಅಂದಿನ ದಿನಗಳಲ್ಲಿ ಮೂವತ್ತಕ್ಕೂ ಹೆಚ್ಚು ಪದವಿ ಪಡೆದವರು. ನಾವು ಆರ್ಥಿಕವಾಗಿ ಸಮಾನತೆ ನಾವು ಕಂಡಿಲ್ಲ ಸಾಮಾಜಿಕವಾಗಿ ಮತ ಚಲಾಯಿಸುವ ಹಕ್ಕು ಬಿಟ್ಟರೆ ಬೇರೆ ಯಾವ ಕ್ಷೇತ್ರದಲ್ಲಿ ಇನ್ನೂ ಸಮಾನತೆ ಕಂಡಿಲ್ಲ. ದಲಿತರಿಗೆ ಯಾರಿಗೂ ಹತ್ತು ಹದಿನೈದು ಎಕರೆ ಭೂಮಿ ಇಲ್ಲ , ದಲಿತರು ಹೆಚ್ಚು ವಿದ್ಯಾವಂತರು ಆದರೆ ಬಾಬಾ ಸಾಹೇಬ್ ಕಂಡ ಕನಸು ನನಸಾಗಲಿದೆ ಎಂದರು.

ಹಿರಿಯ ದಲಿತ ಮುಖಂಡ ದಾಡಿ ವೆಂಕಟೇಶ್ ಮಾತನಾಡಿ ಬಾಬಾ ಸಾಹೇಬ್ ಅಂಬೇಡ್ಕರ್ದ್ ಅವರು ಒಂದು ಮಾತು ಹೇಳಿದ್ದರು ಸ್ವಾರ್ಥಕ್ಕಾಗಿ ಬದುಕುವ ವ್ಯಕ್ತಿಗಳು ಬಹು ಬೇಗ ಸಮಾಜದ ನೆನಪಿನಲ್ಲಿ ಸಾಯುವರು ಸಮಾಜಕ್ಕಾಗಿ ಬದುಕುವರಿ ಬಹು ದಿನಗಳ ಕಾಲ ಜನರ ಮನಸ್ಸಿನಲ್ಲಿ ಬದುಕಿರುತ್ತಾರೆ.

ಹೀಗೆ ನಮ್ಮ ಬಾಬಾ ಸಾಹೇಬ್ ರವರು ಸಮಾಜಕ್ಕಾಗಿ ಹಾಗೂ ದೇಶಕ್ಕಾಗಿ,ಮಹಿಳೆಯರ ಹಕ್ಕುಗಳಿಗಾಗಿ,ದೀನ ದಲಿತರಿಗೆ ಶಿಕ್ಷಣ, ಸಮಾನತೆಯ ಬದುಕು ಎಲ್ಲರಿಗೂ ಸಿಗಬೇಕು ಎಂಬ ಮನೋಭಾವ ಇಟ್ಟುಕೊಂಡಿದ್ದರು. ಹಾಗಾಗಿ ಬಾಬಾಸಾಹೇಬರು ಇಂದಿಗೂ ಸಹ ಭಾರತದ ಪ್ರತಿಯೊಬ್ಬ ಪ್ರಜೆಯ ಮನಸ್ಸಿನಲ್ಲಿ ಇದ್ದಾರೆ.ಬೇರೆ ರಾಷ್ಟ್ರಗಳಲ್ಲಿ ಸಂವಿಧಾನದಲ್ಲಿ ಬಹಳ ಗಟ್ಟಿಯಾಗಿಲ್ಲ ಹಾಗಾಗಿ ಅಲ್ಲಿ ನಡೆಯುವ ಘಟನೆಗಳು ನೀವು ಮಾಧ್ಯಮಗಳಲ್ಲಿ ನೋಡಿ ಓದಿ ತಿಳಿದಿದ್ದೀರಾ, ಆದರೆ ಭಾರತದ ಸಂವಿಧಾನ ಬಹಳ ಗಟ್ಟಿಯಾಗಿದೆ ಹಾಗಾಗಿ ನಮ್ಮ ದೇಶ ಬಹಳ ಸುಭದ್ರವಾಗಿದೆ.ಪ್ರತಿಯೊಬ್ಬ ಭಾರತಿಯರು ಸಂವಿಧಾನದಲ್ಲಿರುವ ಮೊದಲ ಪುಟ ಪೀಠಿಕೆ ಓದಬೇಕು ಎಂದು ಹೇಳಿದರು..

ಈ ಸಂದರ್ಭದಲ್ಲಿ ಇತ್ತೀಚೆಗೆ ಅಗಲಿದ ಸಮಾಜದ ಹಿರಿಯ ಹೋರಾಟಗಾರ ಬಂದಗುಂಟೆ ನಾಗರಾಜ್ ನವರಿಗೆ ಮೌನಾಚರಣೆ ಮಾಡಿ ಸಂತಾಪ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮಾಜಿ ಸೈನಿಕರಿಗೂ ಹಾಗೂ ಅತಿ ಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳಿಗೆ ಗೌರವಧನ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಯಮುನಾ, ಅಗ್ರಹಾರ ಗ್ರಾಮ ಪಂಚಾಯಿತಿ ಅಧ್ಯಕ್ಷ ಸಿ ಡಿ ಪ್ರಭಾಕರ, ಓಬಳಪ್ಪ ಶಿವರಾಮಯ್ಯ, ರಾಜಣ್ಣ ರಂಂಗರಾಜು, ಶ್ರೀನಿವಾಸ್, ಕೆರೆಯಾಗಲಹಳ್ಳಿ ರಾಜಣ್ಣ, ಹೊಳವನಹಳ್ಳಿ ನರಸಿಂಹಮೂರ್ತಿ, ರೇಣುಕಾಪ್ರಸಾದ್, ಮಂಜುನಾಥ್, ನಾಗರಾಜ್, ಮಲಪನಹಳ್ಳಿ ನಾಗೇಶ್, ಮಂಜಮ್ಮ ಸಿದ್ದಗಂಗಮ್ಮ ಸೇರಿದಂತೆ ಸಮಾಜದ ಹಿರಿಯರು ಹಾಗೂ ಮುಖಂಡರು ಮಹಿಳೆಯರು ಇದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. SUB EDITOR- A.S.BANUPRAKASH CONTACT : 9901010109 GMAIL: suryapragathi2021@gmail.com.